# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 244 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 17–04–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 244 | Title- Code: KARKAN 28269 | Chitradurga | Date: 17-04-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪಗೆ ಜಿಲ್ಲಾ ಗುತ್ತಿಗೆದಾರರ ಸಂಘದ ಬೆಂಬಲ: ನಿರ್ಣಯ 2

ಕಾಂಗ್ರೆಸ್ ಪಕ್ಷಕ್ಕೆ ನಿರೀಕ್ಷೆಗಿಂತ ಹೆಚ್ಚಿನ ಜನಬೆಂಬಲ: ಶಾಸಕ ಟಿ.ರಘುಮೂರ್ತಿ 3

ಕಾರಜೋಳರನ್ನು 2 ಲಕ್ಷ ಅಂತರದಿಂದ ಗೆಲ್ಲಿಸಿ: ಬಿ.ಎಸ್.ಯಡಿಯೂರಪ್ಪ ಕರೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕಾಂಗ್ರೆಸ್ ಭದ್ರಕೋಟೆಯಲ್ಲಿ ಫಲ ಕೊಡುವುದೇ ಬಿಜೆಪಿ–ಜೆಡಿಎಸ್ ಮೈತ್ರಿ?

» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಬರದ ನಾಡು ಎಂಬ ಹಣೆಪಟ್ಟಿ ಕಳಚಿ ಹಸಿರು ನಾಡು, ವಿಜ್ಞಾನ ನಗರಿ, ಅಭಿವೃದ್ಧಿ ಎಂದರೆ ಚಳ್ಳಕೆರೆ ಎಂಬ ಹೆಗ್ಗಳಿಕೆಗೆ ಪಾತ್ರವಾಗುವ ಮೂಲಕ ಜಿಲ್ಲೆಯ ಜನರ ಮನೆ ಮಾತಿನಲ್ಲೂ ಅಭಿವೃದ್ಧಿ ಅಂದರೆ ಚಳ್ಳಕೆರೆ ಅಂತೆ ಆಗಬೇಕು ಎಂಬ ಮಾತನ್ನು ಜಿಲ್ಲೆಯ ಜನರು ನೆನಪಿಸಿಕೊಂಡತಹ ಏಕೈಕ ಕ್ಷೇತ್ರ ಚಳ್ಳಕೆರೆ (ಎಸ್ಟಿ ಮೀಸಲು) ವಿಧಾನ ಸಭಾ ಕ್ಷೇತ್ರವಾಗಿದೆ.

**ಕಾಂಗ್ರೆಸ್ ಜೆಡಿಎಸ್ ಬಿಜೆಪಿ ಪಕ್ಷೇತರ ನಡುವೆ ಫೈಟ್:** ಆಯಿಲ್ ಸಿಟಿ, ಮಿನಿ ಬಾಂಬೆ ಎಂಬ ಖ್ಯಾತಿಯು ಚಳ್ಳಕೆರೆ ವಿಧಾನಸಭಾ ಕ್ಷೇತ್ರಕ್ಕೆ ಇದೆ.ಅತಿ ಹೆಚ್ಚು ಬರಗಾಲಕ್ಕೆ ತುತ್ತಾಗಿದ್ದರು ಸಹ ಚಳ್ಳಕೆರೆ ಕ್ಷೇತ್ರದಲ್ಲಿ ರಾಜಕೀಯಕ್ಕೆ ಬರಗಾಲವಿಲ್ಲ. ಕಾಂಗ್ರೆಸ್, ಜೆಡಿಎಸ್ , ಬಿಜೆಪಿ ಪಕ್ಷಗಳ ಜೊತೆ ಪಕ್ಷೇತರ ಅಭ್ಯರ್ಥಿಗಳು ಸದ್ದು ಮಾಡಿ ಮಾಡಿ ಅಖಾಡಕ್ಕೆ ಜಿದ್ದಾ ಜಿದ್ದಿ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಘುಮೂರ್ತಿ ಹ್ಯಾಟ್ರಿಕ್ ಬಾರಿಸಿ ಸೋಲಿಲ್ಲದ ಸರದಾರನಂತೆ ಚಳ್ಳಕೆರೆಯಲ್ಲಿ ಇತಿಹಾಸ ನಿರ್ಮಿಸಿದ್ದಾರೆ.

**ಚಳ್ಳಕೆರೆ ಕ್ಷೇತ್ರದಲ್ಲಿ ರಘುಮೂರ್ತಿ ಹ್ಯಾಟ್ರಿಕ್ ಗೆಲುವು:** ಚಳ್ಳಕೆರೆ ರಾಜಕಾರಣದಲ್ಲಿ ಒಮ್ಮೆ ಶಾಸಕರಾದರು ಮರಳಿ ಶಾಸಕರಾಗಿದ್ದು ತುಂಬಾ ವಿರಳ. ಪ್ರತಿ ಚುನಾವಣೆಯಲ್ಲಿ ಶಾಸಕರನ್ನು ಬದಲಾಯಿಸುತ್ತಾ ಬಂದ ಕ್ಷೇತ್ರವಾಗಿತ್ತು. ಒಮ್ಮೆ ಗೆದ್ದವರು ಮರಳಿ ಗೆದ್ದಿಲ್ಲ. ಆದರೆ 2013 ರಲ್ಲಿ ಕಾಂಗ್ರೆಸ್ ಪಕ್ಷದಿಂದ ಗೆಲುವು ಕಂಡ ಶಾಸಕ ಟಿ.ರಘುಮೂರ್ತಿ ಅವರು ಮಾತ್ರ ಕಳೆದ 2018 ಮತ್ತು 2023 ಎರಡು ಚುನಾವಣೆಯಲ್ಲಿ ಶಾಂತಿಮೂರ್ತಿಯಾಗಿ ಈ ಬಾರಿ ನಾನೇ ಶಾಸಕ ಎಂಬ ಮಾತುಗಳನ್ನು ಹಾಡಿ ತೊಡೆ ತಟ್ಟಿ ಅಖಾಡ ಪ್ರವೇಶಿಸಿದ್ದ ಕಮಲ–ದಳ ಕಲಿಗಳನ್ನು ಸೋಲಿಸಿ ಮನೆಗೆ ಕಳಸಿದ ಸೈಲೆಂಟ್ ರಾಜಕಾರಣಿ ಎಂದರೆ ತಪ್ಪಗಲಾರದು. ಶಾಸಕ ಟಿ. ರಘುಮೂರ್ತಿ ಅವರಿಗೆ ಲೋಕಸಭೆ ಸವಾಲು ಎದುರಾಗಿದ್ದು ಅಖಾಡಲ್ಲಿ ಮತ್ತೊಮ್ಮೆ ತನ್ನ ಶಕ್ತಿ ಪ್ರದರ್ಶಿಸುವ ಸವಾಲು ಎದುರಾಗಿದೆ.

**ಲೋಕಸಭೆ ಟಿಕೆಟ್ ಘೋಷಿಸಿದ ದಿನದಿಂದಲೇ ರಣತಂತ್ರ ಹೆಣೆದು ಅಖಾಡ ಪ್ರವೇಶ:** ಕಾಂಗ್ರೆಸ್ ಅಭ್ಯರ್ಥಿ ಬಿ.ಎಚ್. ಚಂದ್ರಪ್ಪ ಅವರು ಅಧಿಕೃತ ಕಾಂಗ್ರೆಸ್ ಅಭ್ಯರ್ಥಿ ಎಂದು ಘೋಷಿಸಿದ ದಿನದಿಂದಲೇ ಅಖಾಡ ಪ್ರವೇಶ ಮಾಡಿದ ಶಾಸಕ ಟಿ.ರಘುಮೂರ್ತಿ ಹೋಬಳಿ ಮಟ್ಟ, ಗ್ರಾಪಂ ಮಟ್ಟದಲ್ಲಿನ ಸ್ಥಳೀಯ ಜನಪ್ರತಿನಿಧಿಗಳ ,ಮುಖಂಡರ, ಕಾರ್ಯಕರ್ತರ ಸಭೆಗಳನ್ನು ನಡೆಸಿಕೊಂಡು ಕ್ಷೇತ್ರದಲ್ಲಿ ಒಂದು ರೌಂಡ್ ಬಿರುಸಿನ ಪ್ರಚಾರ ನಡೆಸಿ ಎರಡನೇ ಸುತ್ತಿನ ಕ್ಷೇತ್ರ ಸಂಚಾರ ಆರಂಭಿಸಿ ಪ್ರತಿ ಹಳ್ಳಿಯಲ್ಲಿ ಬಿರುಸಿನ ಚುನಾವಣಾ ಪ್ರಚಾರ ನಡೆಸುತ್ತಿದ್ದು ಗ್ಯಾರೆಂಟಿ ಮತ್ತು ಅಭಿವೃದ್ಧಿ ಕಾರ್ಯದ ಮೇಲೆ ಮತಬೇಟೆ ಮಾಡುತ್ತಿದ್ದು ಪಕ್ಷಕ್ಕೆ ಎಷ್ಟು ಲೀಡ್ ನೀಡುತ್ತಾರೆ ಎಂಬುದು ಕಾದು ನೋಡಬೇಕಿದೆ.

**ಮೈತ್ರಿ ವೇದಿಕೆಯಲ್ಲಿ ಮೂವರು ಶಾಸಕ ಆಕಾಂಕ್ಷಿಗಳು:** ಚಳ್ಳಕೆರೆ ಕ್ಷೇತ್ರದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಪರಿಣಾಮ ಎರಡು ಪಕ್ಷಗಳ ನಡುಗೆ ಒಮ್ಮತ ಮೂಡಿಸುವ ದೃಷ್ಟಿಯಿಂದ ಚಳ್ಳಕೆರೆ ನಗರದಲ್ಲಿ ಸಮನ್ವಯ ಸಭೆಗಳು ನಡೆಸುವ ಮೂಲಕ ಎಲ್ಲಾರನ್ನು ಒಂದೇ ವೇದಿಕೆಗೆ ತರುವ ಪ್ರಯತ್ನ ನಡೆಸುತ್ತಿದ್ದಾರೆ. ಈ ಸಭೆಗಳಲ್ಲಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪರಾಭವಗೊಂಡ ಬಿಜೆಪಿ ಪಕ್ಷದಿಂದ ಅನಿಲ್‌ಕುಮಾರ್ ಜೆಡಿಎಸ್ ಅಭ್ಯರ್ಥಿ ಎಂ.ರವಿೀಶ್ ಕುಮಾರ್ ಇಬ್ಬರೂ ಭಾಗವಹಿಸಿದ್ದಾರೆ.ಇದರ ಜೊತೆಗೆ ತಂದೆ ನಾಮಬಲದಲ್ಲಿ ರಾಜಕೀಯ ನೆಲೆ ಹುಡುಕಾಟದಲ್ಲಿದ್ದ ತನ್ನದೇ ಬೆಂಬಲಿಗರನ್ನು ಹೊಂದಿರುವ ಕೆ.ಟಿ. ಕುಮಾರಸ್ವಾಮಿ ಸಮನ್ವಯ ಸಭೆಯಲ್ಲಿ ಯಡಿಯೂರಪ್ಪ ಸಮ್ಮುಖದಲ್ಲಿ ಬಿಜೆಪಿ ಸೇರಿದ್ದು ಬಿಜೆಪಿ ನಾಯಕರಿಗೆ ಒಂದಿಷ್ಟು ಮತಗಳು ಪ್ಲಸ್ ಆಗಬಹುದು ಎಂಬ ಲೆಕ್ಕಚಾರದಲ್ಲಿ ಬಿಜೆಪಿ ನಾಯಕರು ಉತ್ಸಾಹದಿಂದ ಸ್ವಾಗತ ಬಯಸಿದ್ದು ಯಾರು ಎಷ್ಟು ಮತಗಳನ್ನು ಮೈತ್ರಿ ಅಭ್ಯರ್ಥಿಗೆ ಕೊಡಿಸುತ್ತಾರೋ ಎಂಬುದನ್ನು ನೋಡಲು ಫಲಿತಾಂಶದ ತನಕ ಕಾಯಬೇಕಾಗಿದೆ

**ಜೆಡಿಎಸ್–ಬಿಜೆಪಿ ವಿಕ್ ಮಾಡಲು ಸೆಕೆಂಡ್ ಲೈನ್ ಲೀಡರ್ ಅಪರೇಷನ್ ಗೆ ಮುಂದಾದ ರಘುಮೂರ್ತಿ:** ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ ಮತ್ತು ಅಭಿವೃದ್ಧಿ ಕಾರ್ಯ ಒಪ್ಪಿ ಬಂದರೆ ಸ್ವಾಗತ ಎಂಬ ಓಪನ್ ಆಫರ್ ಮೂಲಕ ಶಾಸಕರ ಬಳಿ ಬರಲು ಮುಜುಗರ ಇದ್ದ ಜೆಡಿಎಸ್ – ಬಿಜೆಪಿ ಮುಖಂಡರಿಗೆ, ಸ್ಥಳೀಯ ಜನಪ್ರತಿನಿಧಿಗಳಿಗೆ ನಿಮ್ಮ ಸಮಸ್ಯೆಗಳಿಗೆ ನಾನಿರ್ತೇನೆ ನೋ ಪ್ರಾಬಂ ಬನ್ನಿ ಎಂದ ಕೂಡಲೇ ಜೆಡಿಎಸ್ ಬಲಿಷ್ಠ ನೆಲೆಯಿರುವ ಪರಶುರಾಂಪುರ ಹೋಬಳಿಯಲ್ಲಿ ಪ್ರಭಾವಿ ಮಾಜಿ ಜಿಪಂ ಮಾಜಿ ಸದಸ್ಯ ಮುತ್ತುರಾಜ್, ಗ್ರಾ.ಪಂ. ಸದಸ್ಯರು, ಚಳ್ಳಕೆರೆ ನಗರದ ಜೆಡಿಎಸ್ ಮುಖಂಡರು ಮಾಜಿ ನಗರಸಭೆ ಅಧ್ಯಕ್ಷರು, ಸದಸ್ಯರು ಸೇರಿದಂತೆ ಹಲವು ಜೆಡಿಎಸ್ ಮತ್ತು ಬಿಜೆಪಿ ಮುಖಂಡರನ್ನು ಸೆಳೆದು ಕಾಂಗ್ರೆಸ್‌ಗೆ ಸೇರ್ಪಡೆ ಮಾಡಿಕೊಳ್ಳುವ ಮೂಲಕ ಚಳ್ಳಕೆರೆ ರಾಜಕಾರಣದಲ್ಲಿ ಸಂಚಲನ ಮೂಡಿಸಿದ್ದಾರೆ.




ನಮ್ಮಜನ ವಿಶೇಷ



2023

## ಕಾಂಗ್ರೆಸ್‌ಗೆ ಸಂಪ್ರದಾಯಿಕ ಮತಗಳೇ ಶ್ರೀರಕ್ಷೆ

ಚಳ್ಳಕೆರೆ ವಿಧಾನಸಭೆ ಕ್ಷೇತ್ರದಲ್ಲಿ ಕಳೆದ 2013, 2018ರ ವಿಧಾನಸಭೆ ಫಲಿತಾಂಶದ ಪಕ್ಷಗಳ ಬಲಾಬಲ, ನಂತರ ಕ್ರಮವಾಗಿ 2014, 2019 ರಲ್ಲಿ ನಡೆದ ಲೋಕಸಭೆ ಚುನಾವಣೆ ಫಲಿತಾಂಶದ ಮತಗಳಿಕೆ ಗಮನಿಸಿದಾಗ ಕಾಂಗ್ರೆಸ್ ತನ್ನ ಸಂಪ್ರದಾಯಿಕ ಓಟ್ ಬ್ಯಾಂಕ್‌ನಿಂದಲೇ ತನ್ನ ಅಸ್ತಿತ್ವ ಉಳಿಸಿಕೊಳ್ಳುತ್ತ ಬಂದಿರುವುದು ಮತಗಳು ಪ್ರಮಾಣದಲ್ಲಿ ಸ್ಪಷ್ಟವಾಗುತ್ತದೆ.

## ಕಳೆದ ಬಾರಿಯ ಮೈತ್ರಿ ಫಲ ನೀಡಲಿಲ್ಲ 2019ರ ಲೋಕಸಭಾ ಚುನಾವಣೆ ಮತಗಳಿಕೆ

ಕಾಂಗ್ರೆಸ್, ಜೆಡಿಎಸ್ ಮೈತ್ರಿ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ 72,987 ಮತ ಪಡೆದರು. ಆದರೆ ಜೆಡಿಎಸ್ ಮೈತ್ರಿ ಫಲವಾಗಿಯು ಕಾಂಗ್ರೆಸ್‌ಗೆ ಹೆಚ್ಚುವರಿಯಾಗಿ ದಕ್ಕಿರುವುದು ಕೇವಲ 113 ಮತಗಳು ಮಾತ್ರ. ವಿಧಾನ ಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ 33,471 ಮತಗಳನ್ನ ಪಡೆದಿದ್ದರೆ, ಲೋಕಾ ಚುನಾವಣೆಯಲ್ಲಿ ಬಿಜೆಪಿಯ ಎ.ನಾರಾಯಣಸ್ವಾಮಿ 70,223 ಮತಗಳನ್ನು ಪಡೆದಿದ್ದಾರೆ. ಹೆಚ್ಚುವರಿಯಾಗಿ 36,471 ಮತಗಳನ್ನು ಪಡೆದಿದ್ದಾರೆ.

## 2014ರಲ್ಲಿ ನಡೆದ ಲೋಕಸಭಾ ಚುನಾವಣೆ ಮತಗಳಿಕೆ

ಕಾಂಗ್ರೆಸ್ : ಬಿ.ಎನ್.ಚಂದ್ರಪ್ಪ, 59,961 ಮತ ಜೆಡಿಎಸ್ ಗೂಳಿಹಟ್ಟಿ ಶೇಖರ್ 23,208 ಮತ ಬಿಜೆಪಿಯ ಜನಾರ್ಧನಸ್ವಾಮಿ 40,929 ಮತ ಪಡೆದಿದ್ದಾರೆ. ಇಲ್ಲಿ2013 ರಲ್ಲಿ ವಿಧಾನಸಭೆಯಲ್ಲಿ ವಿಭಜನೆಯಾಗಿರುವ ಕೆಜೆಪಿ, ಬಿಜೆಪಿ ಮತಗಳು ಒಗ್ಗೂಡಿರುವ ಕ್ಲಿಯರ್ ಪಿಚ್ಚರ್ ದೊರೆಯುತ್ತದೆ.

## ಮತದಾರರ ವಿವರ

| ಪುರುಷರು | ಮಹಿಳೆಯರು | ತೃತಿಯಲಿಂಗ | ಒಟ್ಟು ಮತದಾರರು |
|---|---|---|---|
| 1,11,280 | 1,13,160 | 07 | 2,24,447 |

## 2013ರ ವಿಧಾನಸಭೆ ಚುನಾವಣೆ ಮತಗಳಿಕೆ


| | | |
|---|---|---|
| ಕಾಂಗ್ರೆಸ್ | ಟಿ.ರಘುಮೂರ್ತಿ | 60,197 ಮತ |
| ಜೆಡಿಎಸ್ | ಪಿ.ತಿಪ್ಪೆಸ್ವಾಮಿ | 27,373 ಮತ |
| ಕೆಜೆಪಿ | ಕೆ.ಟಿ.ಕುಮಾರಸ್ವಾಮಿ | 37,074 ಮತ |
| ಬಿಜೆಪಿ | ಜಯಪಾಲಯ್ಯ | 12,981 ಮತ |

## 2018 ರ ವಿಧಾನಸಭೆ ಚುನಾವಣೆ ಫಲಿತಾಂಶ

| | | |
|---|---|---|
| ಕಾಂಗ್ರೆಸ್ | ಟಿ.ರಘುಮೂರ್ತಿ | 72,874 ಮತ |
| ಜೆಡಿಎಸ್ | ಎಂ.ರವಿಶ್ ಕುಮಾರ್ | 59,335 ಮತ |
| ಬಿಜೆಪಿ | ಕೆ.ಟಿ.ಕುಮಾರಸ್ವಾಮಿ | 33,471 ಮತ |

## 2023ರ ವಿಧಾನ ಸಭೆ ಚುನಾವಣೆ ಫಲಿತಾಂಶ

| | | |
|---|---|---|
| ಟಿ.ರಘುಮೂರ್ತಿ | ಕಾಂಗ್ರೆಸ್ | 67,952 |
| ಆರ್.ಅನಿಲ್‌ಕುಮಾರ್ | ಬಿಜೆಪಿ | 22,894 |
| ಎಂ.ರವೀಶ್‌ಕುಮಾರ್ | ಜೆಡಿಎಸ್ | 51,502 |
| ಕೆ.ಟಿ.ಕುಮಾರಸ್ವಾಮಿ | ಪಕ್ಷೇತರ | 29,148 |
| ಗೆಲುವಿನ ಅಂತರ | | 16,450 |



2019



2024

## 2019 ಲೋಕಸಭೆಯಲ್ಲಿ ಅಭ್ಯರ್ಥಿ ಪಡೆದ ಮತಗಳು

- ಬಿ.ಎನ್.ಚಂದ್ರಪ್ಪ ಕಾಂಗ್ರೆಸ್ 72,987 ಮತ
- ಎ.ನಾರಾಯಣಸ್ವಾಮಿ ಬಿಜೆಪಿ 70.223 ಮತ

## ಫಾಸ್ಟ್ ನ್ಯೂಸ್

### ಆರ್ಥಿಕ ನೆರವು ಪಡೆಯಲು ಅರ್ಜಿ

» ಚಿತ್ರದುರ್ಗ

ಒಂದನೇ ತರಗತಿಯಿಂದ ವೃತ್ತಿಪರ ಶಿಕ್ಷಣವಲ್ಲದ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಹವಾಲ್ದಾರ್ ರ್‍ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳು ಕೇಂದ್ರಿಯ ಸೈನಿಕ ಮಂಡಳಿಯಿಂದ ಆರ್ಥಿಕ ನೆರವು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಕೇಂದ್ರಿಯ ಸೈನಿಕ ಮಂಡಳಿಯ ಜಾಲತಾಣ ONLINE.KSB.GOV.IN ದಲ್ಲಿ ಆರ್ಥಿಕ ನೆರವು (ಫೈನಾನ್ಷಿಯಲ್ ಅಸಿಸ್ಟೆನ್ಸ್) ಎಂಬ ಶೀರ್ಷಿಕೆಯಡಿಯಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, 2024 ನವೆಂಬರ್ 30 ಕೊನೆಯ ದಿನವಾಗಿದೆ. ಕೇಂದ್ರಿಯ ಸೈನಿಕ ಮಂಡಳಿಯ ಮಾರ್ಗಸೂಚಿಯಂತೆ ಆರ್ಥಿಕ ನೆರವಿಗಾಗಿ ಅರ್ಜಿ ಸಲ್ಲಿಸಿದವರು, ಅರ್ಜಿ ಸಲ್ಲಿಸಿದ ಪ್ರತಿ ಹಾಗೂ ಸಂಬಂಧಿತ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಗೆ ಖುದ್ದಾಗಿ ಭೇಟಿ ಅನುಮೋದನೆ ಪಡೆಯಬೇಕಾಗಿ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182–220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಹೊಸದುರ್ಗ: ಇಂದು ಪ್ರಾಣಿ ಬಲಿ ನಿಷೇಧ

» ಹೊಸದುರ್ಗ



ಎಪ್ರಿಲ್ 17 ರಂದು ಬುಧವಾರ ಶ್ರೀರಾಮನವಮಿ ಇರುವ ಪ್ರಯುಕ್ತ ಪಟ್ಟಣದಲ್ಲಿ ಪ್ರಾಣಿ ಬಲಿ ಮತ್ತು ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೆಧಿಸಲಾಗಿದೆ ಎಂದು ಪುರಸಭಾ ಆರೋಗ್ಯಾಧಿಕಾರಿ ತಿಮ್ಮರಾಜು.ಜಿ.ವಿ ತಿಳಿಸಿದ್ದಾರೆ.ಈ ವಿಚಾರವಾಗಿ ಪಟ್ಟಣದಲ್ಲಿ ಈಗಾಲೆ ಪಟ್ಟಣದ ವ್ಯಾಪ್ತಿಯಲ್ಲಿ ಯಾವುದೇ ಪ್ರಾಣಿ ಬಲಿ ಮಾಂಸ ಮಾರಾಟ ಮಾಡುವಅಂಗಡಿಗಳಿಗೆಉದ್ದಿಮೆಯನ್ನು ಬಂದ್ ಮಾಡಿ ತೆರೆಯದಂತೆ ಆದೇಶವನ್ನ ನೀಡಿ ನೋಟಿಸ್ ಜಾರಿ ಮಾಡಲಾಗಿದ್ದು ಕಾನೂನು ಉಲ್ಲಂಘಿಸಿ ಮಾರಾಟ ಮಾಡಿದ್ದೆ ಆದರೆ ಕಾನೂನು ರೀತಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

### ಲೋಕಸಭಾ: ಮೂರನೇ ದಿನ, 3 ನಾಮಪತ್ರ ಸಲ್ಲಿಕೆ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ನಾಮಪತ್ರ ಸಲ್ಲಿಕೆಗೆ ಮೂರನೇ ದಿನವಾದ ಏಪ್ರಿಲ್ 16 ರಂದು 3 ಅಭ್ಯರ್ಥಿಗಳಿಂದ 3 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ನಾಮಪತ್ರ ಸಲ್ಲಿಸಿದವರ ವಿವರ; ಅಖಿಲ ಭಾರತ ಹಿಂದೂ ಮಹಾ ಪಕ್ಷದಿಂದ ಎ.ಕೆ. ಗಣೇಶ್, ರಾಣಿ ಚೆನ್ನಮ್ಮ ಪಾರ್ಟಿಯಿಂದ ವೀರೇಶ್.ಎಸ್, ಪಕ್ಷೇತರರಾಗಿ ಬರ್ಕತ್ ಅಲಿ ಇಂದು ನಾಮಪತ್ರ ಸಲ್ಲಿಸಿದವರು. ಇದುವರೆಗೆ ಒಟ್ಟು 15 ಅಭ್ಯರ್ಥಿಗಳಿಂದ 18 ನಾಮಪತ್ರಗಳು ಸಲ್ಲಿಕೆಯಾಗಿದೆ. ಏ.12 ರಂದು ಐದು ಅಭ್ಯರ್ಥಿಗಳಿಂದ 6 ನಾಮಪತ್ರಗಳು, ಏ.15 ರಂದು 8 ಅಭ್ಯರ್ಥಿಗಳಿಂದ 9 ನಾಮಪತ್ರಗಳು ಹಾಗೂ ಏ.16 ರಂದು 3 ಅಭ್ಯರ್ಥಿಗಳಿಂದ 3 ನಾಮಪತ್ರಗಳು ಸಲ್ಲಿಕೆಯಾಗಿವೆ. ಕಾಂಗ್ರೆಸ್ ಪಕ್ಷದಿಂದ ಡಾ; ಪ್ರಭಾ ಮಲ್ಲಿಕಾರ್ಜುನ್ ಅವರು ಮೊದಲ ದಿನ ಎರಡು ಮತ್ತು ಸೋಮವಾರ 2 ನಾಮಪತ್ರ ಸೇರಿ ಒಟ್ಟು 4 ನಾಮಪತ್ರ ಸಲ್ಲಿಸಿರುತ್ತಾರೆ.

## ವಾಣಿಜ್ಯ ಉದ್ದೇಶಕ್ಕಾಗಿ ಕೊಳವೆಬಾವಿ ನೀರು ಮಾರಾಟ ನಿಷೇಧ: ಡಿಸಿ



**ಚಿತ್ರದುರ್ಗ :** ಜಿಲ್ಲೆಯಲ್ಲಿ ತೀವ್ರತರನಾದ ಬರಗಾಲ ಆವರಿಸಿದೆ. ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗಿದೆ. ಕೊಳವೆಬಾವಿಗಳಲ್ಲಿ ದಿನದಿಂದ ದಿನಕ್ಕೆ ನೀರಿನ ಪ್ರಮಾಣ ಗಣನೀಯವಾಗಿ ಕುಸಿಯುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವುದು ಜಿಲ್ಲಾಡಳಿತದ ಪ್ರಥಮ ಆದ್ಯತೆಯಾಗಿದೆ. ಖಾಸಗಿ ಕೊಳವೆಬಾವಿ ಮಾಲೀಕರು ಹೆಚ್ಚು ಹಣ ಗಳಿಸುವ ಉದ್ದೇಶದಿಂದ, ನೀರು ಮಾರಾಟ ಮಾಡುವುದನ್ನು ಉದ್ದಿಮೆ ಮಾಡಿಕೊಂಡಿದ್ದಾರೆ. ಜಿಲ್ಲೆಯಾದ್ಯಂತ ಅವ್ಯಹತವಾಗಿ ನೀರು ಮಾರಾಟ ಮಾಡುವ ಪ್ರಕರಣಗಳು ಕಂಡುಬರುತ್ತವೆ. ವಾಣಿಜ್ಯ ಉದ್ದೇಶಗಳಿಗೆ ನೀರು ಮಾರಾಟ ಮಾಡುವುದನ್ನು ನಿಷೇಧಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆ.ಇದರ ಅನ್ವಯ ವಿಪತ್ತು ನಿರ್ವಹಣಾ ಕಾಯ್ದೆ 2005 ಕಲಂ 30(1)ಅಡಿ, ಜಿಲ್ಲಾ ವ್ಯಾಪ್ತಿಯಲ್ಲಿ ಖಾಸಗಿ ಕೊಳವೆ ಬಾವಿಗಳ ಮೂಲಕ ವಾಣಿಜ್ಯ ಉದ್ದೇಶಕ್ಕೆ ಕುಡಿಯುವ ನೀರು ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಆದೇಶ ಉಲ್ಲಂಘಿಸುವವರು ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ಕಲಂ 51 (ಬಿ) ಮತ್ತು 57ರ ಅಡಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಸಿದ್ದಾರೆ.

## ಫಾಸ್ಟ್ ನ್ಯೂಸ್

### ರಾಣೀಕೆರೆ ಗ್ರಾಮೀಣ ಕಾಲೇಜುಗೆ ಪಿಯುಸಿಯಲ್ಲಿ ಶೇ.82 ಫಲಿತಾಂಶ

» ಚಳ್ಳಕೆರೆ







ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಯಾದ್ಯಂತ ಉತ್ತಮ ಫಲಿತಾಂಶ ಲಭ್ಯವಾಗಿದೆ. ತಾಲ್ಲೂಕಿನ ಗ್ರಾಮೀಣ ಭಾಗದ ಕಾಲೇಜುಗಳಲ್ಲೂ ಸಹ ಈ ಫಲಿತಾಂಶ ಸಮದಾನ ತರಿಸಿದ್ದು, ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ. ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ರಾಣೀಕೆರೆ ಗ್ರಾಮೀಣ ಸಂಯುಕ್ತಪದವಿಪೂರ್ವ ಕಾಲೇಜು ಈ ಬಾರಿಯ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶೇ. 82 ರಷ್ಟು ಫಲಿತಾಂಶ ದಾಖಲಿಸಿ ಗ್ರಾಮೀಣ ಭಾಗದ ಕಾಲೇಜುಗಳಲ್ಲಿ ಅಭ್ಯಾಸ ಮಾಡಿದ ವಿದ್ಯಾರ್ಥಿಗಳು ಸಹ ಉತ್ತಮ ಫಲಿತಾಂಶ ಪಡೆಯುವ ಮೂಲಕ ಶಿಕ್ಷಣ ರಂಗದ ಚೇತರಿಕೆಗೆ ಕಾರಣಕರ್ತರಾಗಿದ್ದಾರೆ. ಸಂಸ್ಥೆಯ ಕಾರ್ಯದರ್ಶಿ ಕೆ.ಎಚ್.ಸುದರ್ಶನರೆಡ್ಡಿ ಮಾಹಿತಿ ನೀಡಿ, ಕಳೆದ ಹಲವಾರು ದಶಕಗಳಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕಾರ್ಯನಿರ್ವಹಿಸುತ್ತಿರುವ ನಮ್ಮ ಸಂಸ್ಥೆ ಉತ್ತಮ ಫಲಿತಾಂಶ ಪಡೆದಿದೆ. ಕಲಾವಿಭಾಗದಲ್ಲಿ 25 ವಿದ್ಯಾರ್ಥಿಗಳಿಗೆ 18 ವಿದ್ಯಾರ್ಥಿಗಳು, ವಾಣಿಜ್ಯವಿಭಾಗದಲ್ಲಿ 19 ವಿದ್ಯಾರ್ಥಿಗಳಿಗೆ 18 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ. 82ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ವಾಣಿಜ್ಯ ವಿಭಾಗದ ಜೆ.ಕರಿಬಸಮ್ಮ-577, ಎಚ್.ರಶ್ಮಿತ-563, ಟಿ.ಸರಿತ-543, ಜೆ.ವೀಣಾ-534, ಎಚ್.ಮನು-494, ಎಂ.ರಮ್ಯ-493, ಕೆ.ಜಯಶ್ರೀ-477, ಟಿ.ಎಂ.ಅಂಕಿತ-469, ಆರ್.ರಾಧಿಕ-453. ಕಲಾವಿಭಾಗದಲ್ಲಿ ಆರ್.ರಮ್ಯ-526, ಟಿ.ಕಾವ್ಯ-491, ಒ.ದಿವ್ಯ-440, ಟಿ.ರಂಜಿತ-417, ಎಚ್.ಅಕ್ಷಿತ-411, ಎಲ್.ಮಹೇಶ್-406 ಅಂಕ ಪಡೆದಿದ್ದಾರೆ.

### ಮಾನವಿ ಇಜಾರಿಗೆ ಶೇ.94 ಫಲಿತಾಂಶ

» ಹೊಸದುರ್ಗ



2023-24 ನೇ ಸಾಲಿನಲ್ಲಿ ನಡೆದ ಪಿ.ಯು.ಸಿ ಪರೀಕ್ಷೆಯಲ್ಲಿ ಪಟ್ಟಣದ ಮಾನವಿ ಹೆಚ್.ಎ ಇಜಾರಿ ಈ ವಿದ್ಯಾರ್ಥಿನಿ ವಿಜ್ಞಾನ ವಿಭಾಗದಲ್ಲಿ 564 ಅಂಕಗಳನ್ನು ಗಳಿಸಿ (ಶೇ.94ರಷ್ಟು) ಕಾಲೇಜಿಗೆ ಕೀರ್ತಿ ತಂದಿದ್ದು ಮಾನವಿ ಇಜಾರಿ ಶಿರಾ ಪ್ರೆಸೆಡೆನ್ಸಿ ಪಿ.ಯು.ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತಿದ್ದು ಈ ವಿದ್ಯಾರ್ಥಿನಿ ಹೊಸದುರ್ಗ ಪಟ್ಟಣದ ಅಶ್ವಿನಿಕುಮಾರ್ ಹಾಗೂ ಭವ್ಯ ಇವರ ಪುತ್ರಿ.ಈ ವಿದ್ಯಾರ್ಥಿನಿಗೆ ತಾಲೂಕು ಜೈನ ಸಮಾಜ ಅಭಿನಂದಿಸಿದೆ.

### ಬಿ.ಎನ್.ಚಂದ್ರಪ್ಪ ನವರ ಪರವಾಗಿ ಮತಯಾಚನೆ



» ಹೊಸದುರ್ಗ

ತಾಲೂಕಿನ ಯುವ ಮುಖಂಡ ಬಿ.ಜಿ.ಅರುಣ್ ಗೋವಿಂದಪ್ಪ ನವರು ಪಟ್ಟಣದ 9 ಮತ್ತು 10 ನೇ ವಾರ್ಡ್ ನಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಬಿ.ಎನ್.ಚಂದ್ರಪ್ಪ ನವರ ಪರವಾಗಿ ಮತಯಾಚನೆ ಮಾಡಿದರು. ಮತ್ತು ಪ್ರತಿ ಮನೆ ಮನೆಗೂ ಗ್ಯಾರಂಟಿ ಕಾರ್ಡ್ ವಿತರಣೆ ಮಾಡಿದರು ಈ ಸಂಧರ್ಬದಲ್ಲಿ ನಗರ ಘಟಕದ ಕಾಂಗ್ರೆಸ್ ಅಧ್ಯಕ್ಷರಾದ ಆಗ್ರೋ ಶಿವಣ್ಣ ಮಹಿಳಾ ಘಟಕದ ಅಧ್ಯಕ್ಷರಾದ ದೀಪಿಕಾ ಸತೀಶ್ ಮಾಜಿ ಪುರಸಭಾ ಸದಸ್ಯರಾದ ದಳವಾಯಿ ವೆಂಕಟೇಶ್ 9 ನೇ ವಾರ್ಡ್ ನ ಮಾಜಿ ಪುರಸಭಾ ಸದಸ್ಯರಾದ ಕೆಂಚಪ್ಪ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಸಂತ್ ಕುಮಾರ್ ನಜೀರ್ ಹಮ್ಮು ನಿಖಿಲ್ ಮತ್ತು 9 ಮತ್ತು 10 ನೇ ವಾರ್ಡ್ ನ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪಗೆ ಜಿಲ್ಲಾ ಗುತ್ತಿಗೆದಾರರ ಸಂಘದ ಬೆಂಬಲ: ಸಭೆಯಲ್ಲಿ ನಿರ್ಣಯ

# ಬಿಜೆಪಿಯ ಕಾರಜೋಳ ಕಂಟ್ರಾಕ್ಟರ್‌ಗಳಿಗೆ ಕಂಟಕ

» ಚಿತ್ರದುರ್ಗ



ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರನ್ನು ಬೆಂಬಲಿಸಲು ಜಿಲ್ಲಾ ಗುತ್ತಿಗೆದಾರರ ಸಂಘ ನಿರ್ಣಯ ಕೈಗೊಂಡಿದೆ.

ಜೋಗಿಮಟ್ಟಿ ರಸ್ತೆಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಆರ್.ಮಂಜುನಾಥ್ ನಿವಾಸದ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಂಟ್ರಾಕ್ಟರ್‌ಗಳ ಸಭೆಯಲ್ಲಿ ಸರ್ವಾನುಮತದಿಂದ ಈ ನಿರ್ಣಯ ಕೈಗೊಳ್ಳಲಾಯಿತು.

ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಆರ್.ಮಂಜುನಾಥ್ ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಸರಳ ಸಜ್ಜನ ರಾಜಕಾರಣಿ. 2014ರಲ್ಲಿ ಎಂಪಿ ಆಗಿದ್ದಾಗ ಯಾವುದೇ ಭ್ರಷ್ಟಾಚಾರದಲ್ಲಿ ಭಾಗಿಯಾಗದೇ ಆಡಳಿತ ನಡೆಸಿದ್ದಾರೆ. ಸಂಸದರ ಅನುದಾನ ಹಂಚಿಕೆ ವೇಳೆ ಯಾರೊಬ್ಬರಿಂದಲೂ ಕಮಿಷನ್ ಪಡೆಯದೆ ಗುಣಮಟ್ಟ ಕಾಮಗಾರಿ ನಡೆಯಲು ಕಾರಣರಾಗಿದ್ದರು. ಹೀಗಾಗಿ ಗುತ್ತಿಗೆದಾರರ ಸಂಘದ ವತಿಯಿಂದ ಸರ್ವಾನುಮತದಿಂದ ಅವರನ್ನು ಬೆಂಬಲಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದರು.

ಬಿಜೆಪಿಅಭ್ಯರ್ಥಿಗೋವಿಂದಕಾರಜೋಳ ಅವರು ಪಿಡಬ್ಲ್ಯೂಡಿ, ಜಲಸಂಪನ್ಮೂಲ ಮಂತ್ರಿಯಾಗಿದ್ದಾಗ ಗುತ್ತಿಗೆದಾರರ ಬಿಲ್ ಪಾವತಿಸಲು ಶೇ.25 ರಷ್ಟು ಲಂಚಕ್ಕೆ ಒತ್ತಾಯಿಸಿದ್ದರ ಬಗ್ಗೆ ವ್ಯಾಪಕ ಆರೋಪ ಕೇಳಿ ಬಂದಿತ್ತು. ಇಂತಹ ರಾಜಕಾರಣಿ ಕಂಟ್ರಾಕ್ಟರ್‌ಗಳು ಹಾಗೂ ಚಿತ್ರದುರ್ಗಕ್ಕೆ ಕಂಟಕ. ಈ ಕಾರಣಕ್ಕೆ ಸಂಸದರಾಗಿದ್ದ ಸಂದರ್ಭ ಭ್ರಷ್ಟರಹಿತ ಆಡಳಿತ ನಡೆಸಿದ ಚಂದ್ರಪ್ಪ ಅವರನ್ನು ಬೆಂಬಲಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯ ಸುಮಾರು 2000 ಗುತ್ತಿಗೆದಾರರು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರನ್ನು ಬೆಂಬಲಿಸುವ ಜೊತೆಗೆ ಅವರ ಪರ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳುವುದಾಗಿ ತಿಳಿಸಿದರು. ಗುಣಮಟ್ಟದ ಕಾಮಗಾರಿ ಗುತ್ತಿಗೆದಾರರು ಕೈಗೊಳ್ಳಲು ಕಮಿಷನ್ ಪಡೆಯದ ಚಂದ್ರಪ್ಪ ಅವರಂತಹ ಜನಪ್ರತಿನಿಧಿಗಳು ಅಗತ್ಯ ಎಂದರು.

ಮಾಜಿ ಸಚಿವ ಎಚ್.ಆಂಜನೇಯ ಮಾತನಾಡಿ, ನಾನು ಸಮಾಜ ಕಲ್ಯಾಣ ಮಂತ್ರಿಯಾಗಿದ್ದಾಗ ಬಡವರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ಆದರೆ, ಗೋವಿಂದ ಕಾರಜೋಳ ಅವರು ಸಮಾಜ ಕಲ್ಯಾಣ ಇಲಾಖೆ ಮಂತ್ರಿಯಾದ ಸಂದರ್ಭದಲ್ಲಿಯೂ 5 ಲಕ್ಷ ರೂ. ಸಬ್ಸಿಡಿ ಹಣವನ್ನು ರು.1 ಲಕ್ಷ ಸೀಮೀತಗೊಳಿಸಿ ಬಡವರ ಪಾಲಿಗೆ ಮಾರಕವಾದರು. ಎಸ್.ಸಿ.ಎಸ್.ಪಿ, ಟಿಎಸ್ಪಿ ಹಣವನ್ನು ಸಾಮಾನ್ಯ ಖಾತೆಗೆ ವರ್ಗಾಯಿಸಿ ಜನಸಾಮಾನ್ಯರ ಕಲ್ಯಾಣಕ್ಕೆ ಅಡ್ಡಿಪಡಿಸಿದರು ಎಂದು ಆರೋಪಿಸಿದರು.

ಕೇಂದ್ರದಲ್ಲಿಬಿಜೆಪಿಸರ್ಕಾರಬಂದಮೇಲೆ ಬಡವರು ಬಡವರಾಗಿಯೇ ಉಳಿದಿದ್ದಾರೆ. ಶ್ರೀಮಂತರು ಶ್ರೀಮಂತರಾಗುತ್ತಿದ್ದಾರೆ. ದಿನನಿತ್ಯ ಬಳಕೆಯ ಡೀಸೆಲ್, ಪೆಟ್ರೋಲ್, ಗ್ಯಾಸ್, ಆಹಾರ ವಸ್ತುಗಳ ಬೆಲೆ ಏರಿಸುತ್ತಿದೆ. ಇದರಿಂದ ಬಡವರು ಬದುಕುವುದೇ ಕಷ್ಟವಾಗಿದೆ. ಕೇಂದ್ರ ಸರ್ಕಾರ ಕೊಟ್ಟ ಭರವಸೆಗಳಲ್ಲಿ ಇದುವರೆಗೂ ಒಂದನ್ನೂ ಈಡೇರಿಸಿಲ್ಲ ಎಂದು ಆರೋಪಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ದುರಾಡಳಿತಕ್ಕೆ ಬೇಸತ್ತು ಮತದಾರರು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಶ್ರಮಿಸಿದರು. ಅದೇ ಫಲಿತಾಂಶ ಲೋಕಸಭಾ ಚುನಾವಣೆಯಲ್ಲಿಯೂ ಮರುಕಳಿಸಲಿದೆ ಎಂದರು.

ಕಾಂಗ್ರೆಸ್ ಪಕ್ಷವು ನಿರ್ಗತಿಕರ, ಬಡವರ, ಶೋಷಿತರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಆದರೆ, ಬಿಜೆಪಿ ಪಕ್ಷವು ಅವುಗಳೆಲ್ಲವನ್ನು ಮೊಟಕುಗೊಳಿಸಿದೆ ಎಂದು ಆರೋಪಿಸಿದರು.

ಪ್ರಸ್ತುತ ದಿನಮಾನಗಳಲ್ಲಿ ದೇಶದ ಅತ್ಯುನ್ನತ ಪ್ರಜಾಪ್ರಭುತ್ವ ಅಪಾಯದ ಸ್ಥಿತಿಯಲ್ಲಿದ್ದು, ಸಂವಿಧಾನ ಉಳಿವಿಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕಿದೆ. ಬಿಜೆಪಿ ನಾಯಕರು ಬಾಯಿ ಬಿಟ್ಟರೇ ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂದು ಭಾಷಣ ಮಾಡುತ್ತಾರೆ. ಸಂವಿಧಾನವು ಇಡೀ ದೇಶದ ಸರ್ವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರಚನೆಗೊಂಡಿದೆ. ಇದರಿಂದ ಸರ್ವರು ಸಮಾನವಾಗಿ ಬದುಕಲು ಅವಕಾಶ ಮಾಡಿಕೊಟ್ಟಿದೆ. ಇಂತಹ ಸಂವಿಧಾನವನ್ನು ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಬದಲಿಸುತ್ತೇವೆ ಎಂದು ಹೇಳುತ್ತಾರೆ. ಹೀಗಾಗಿ ಪ್ರಜಾಪ್ರಭುತ್ವ ಉಳಿವಿಗೆ ಕಾಂಗ್ರೆಸ್ ಬೆಂಬಲಿಸಬೇಕೆಂದರು.

ಬಿಜೆಪಿಯವರ ಸುಳ್ಳು ಭಾಷಣಗಳು, ನಾಟಕಗಳನ್ನು ಈಗ ಜನ ನಂಬುವುದಿಲ್ಲ. ನಾನು ಸಂಸತ್ ಸದಸ್ಯನಾದ ಸಂದರ್ಭದಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದ ನೀಡದೇ ಆಡಳಿತ ನಡೆಸಿದೆ. ಹೀಗಾಗಿ ಕ್ಷೇತ್ರದ ಯಾವ ಭಾಗಕ್ಕೂ ನಾನು ಹೋದ್ರೆ ಮನೆ ಮಗನಂತೆ ನನ್ನನ್ನು ಕಾಣುತ್ತಿದ್ದಾರೆ. ಗೆಲುವು ನಿಶ್ಚಿತವಾಗಿದೆ ಎಂದರು.

ಜಿಪಂ ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ನಗರಸಭೆ ನಾಮನಿರ್ದೇಶನ ಸದಸ್ಯ ಅಂಗಡಿ ರವಿಕುಮಾರ್,ನಗರಸಭೆಮಾಜಿಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ, ಎಚ್.ಮಂಜಪ್ಪ, ಮಾಜಿ ಉಪಾಧ್ಯಕ್ಷ ಕೆ.ಮಲ್ಲೇಶಪ್ಪ, ಜಿಲ್ಲಾ ಭೋವಿ ಸಂಘದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ತಾಲೂಕು ಗುತ್ತಿಗೆದಾರರ ಸಂಘದ ಅಧ್ಯಕ್ಷ ಹಿರಿಯೂರು ರಂಗಸ್ವಾಮಿ, ಕಾರ್ಯದರ್ಶಿ ಅಜಯ್, ಗುತ್ತಿಗೆದಾರರಾದ ಸಿದ್ದಪ್ಪ, ಮಲ್ಲೇಶ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ.ಕೆ. ತಾಜಪೀರ್ ಇತರರು ಉಪಸ್ಥಿತರಿದ್ದರು.

# ಮದುವೆ ಮನೆಯಲ್ಲಿ ಮತದಾನ ಜಾಗೃತಿ

» ದಾವಣಗೆರೆ




ಮತದಾನ ಎಂಬುದು ಪ್ರಜಾಪ್ರಭುತ್ವದಲ್ಲಿ ಮಹತ್ವದ ದಾನ. ದೇಶದ ಭವಿಷ್ಯ ನಿರ್ಧರಿಸುವ ನಾಯಕರನ್ನ ಆಯ್ಕೆ ಮಾಡುವ ಪವಿತ್ರ ಕಾರ್ಯ. ಇಂತಹ ಮತದಾನ ಬಗ್ಗೆ ಜಾಗೃತಿ ಬಹಳ ಮುಖ್ಯ. ಮತದಾನದ ಬಗ್ಗೆ ಜಾಗೃತಿ ಮಾಡುವುದು ಕೇವಲ ಸರ್ಕಾರದವಕೆಲ್ಸವಲ್ಲ. ಪ್ರತಿಯೊಬ್ಬ ಪ್ರಜ್ಞಾವಂತ ನಾಗರಿಕನ ಜವಾಬ್ದಾರಿ. ಮದುವೆ ಮನೆಯಲ್ಲಿ ಮತದಾನ ಜಾಗೃತಿ ಮಾಡಲಾಯಿತು.

ದಾವಣಗೆರೆ ನಗರದ ಪಿಜೆ ಬಡಾವಣೆ ನಿವಾಸಿಯಾದ ಮಂಗಳಾ ಚಂದ್ರಶೇಖರ ಪುತ್ರ ರಾಮಕುಮಾರ ಹಾಗೂ ಪ್ರೇಮಾ ನಿಂಗಪ್ಪ ಕರಿಗಾರ ಅವರ ಪುತ್ರಿ ತನುಜಾ ಅವರ ವಿವಾಹ ಇಂತಹ ಅರ್ಥಪೂರ್ಣ ಕ್ಷಣಕ್ಕೆ ಸಾಕ್ಷಿಯಾಯಿತು.

ದಾವಣಗೆರೆ ನಗರದ ಎವಿಕೆ ಕಾಲೇಜು ರಸ್ತೆಯಲ್ಲಿ ಇರುವ ಅಕ್ಕ ಮಹಾದೇವಿ ಕಲ್ಯಾಣ ಮಂಟಪದ ಮದುವೆಯಲ್ಲಿ ಮುಂದಿನ ತಿಂಗಳು ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಅತಿ ಹೆಚ್ಚು ಪ್ರಜ್ಞಾವಂತ ನಾಗರಿಕರು ಮತದಾನ ಮಾಡಿ ಮದುವೆಯ ವಿವಾಹಕ್ಕೆ ಬಂದಂತ ಅತಿಥಿಗಳು ವಧು ವರರಿಗೆ ಶುಭಾಶಯ ಕೋರಿ ನಾವೆಲ್ಲರೂ ಮತದಾನ ಮಾಡುತ್ತೇವೆ ಹಾಗೂ ನಮ್ಮ ಸ್ನೇಹಿತರು ಹಾಗೂ ಬಂಧು ಮಿತ್ರರು ಸೇರಿ ಮತಗಟ್ಟೆಗೆ ಬಂದು ಮತದಾನ ಮಾಡಿಸುತ್ತೇವೆ ಎಂದು ಪ್ರಮಾಣ ಮಾಡಿದರು.

ಇದು ನಮ್ಮೆಲ್ಲರ ಜವಾಬ್ದಾರಿ ನಾವೆಲ್ಲರೂ ಸೇರಿ ಲೋಕಸಭಾ ಚುನಾವಣೆಗೂ ದೇಶದ ಹಬ್ಬ ನಾವೆಲ್ಲರೂ ಈ ಹಬ್ಬದಲ್ಲಿ ಜೊತೆಯಾಗೋಣ ಇಂದು ವಾಕ್ಯಗಳನ್ನು ಹೇಳಿದರು.

ಈ ಸಂದರ್ಭದಲ್ಲಿ ದಾವಣಗೆರೆ ತಾಲೂಕು ಫೋಟೋ ಮತ್ತು ವಿಡಿಯೋ ಗ್ರಾಫರ್ ಸಂಘದ ಎಂ. ಮನು, ಇವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು ಗಗನ್, ಕುಮಾರ್, ಪ್ರಕಾಶ್, ಬಾಬು, ಮಮತಾ,ವಿನಯ್, ಶಶಿಧರ್ . ಮಂಜು. ರವಿ ಅಬಿ ಕುಲಕರ್ಣಿ, ಭಾರತ್, ಪೂರ್ಣಿಮಾ, ನೇತ್ರ, ಪುಷ್ಪ, ಅಶ್ವಿನಿ, ವೀಣಾ, ಸೇರಿದಂತೆ ಜಿಲ್ಲಾ ಪಂಚಾಯತ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿಜೆಪಿ ಅಭ್ಯರ್ಥಿ ಗೆಲುವಿಗೆ ಸಹಕರಿಸಿ: ಉಮೇಶ್ ಕಾರಜೋಳ



» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯಾಗಿ ಗೋವಿಂದ ಎಂ.ಕಾರಜೋಳ ಸ್ಪರ್ಧಿಸಿದ್ದು, ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಮೋದಿಯವರ ಬಲವಾದ ಅಲೆ ಎದಿದ್ದು, ಈ ಬಾರಿಯ ಚುನಾವಣೆಯಲ್ಲಿ ಗೋವಿಂದ ಎಂ.ಕಾರಜೋಳ ಹೆಚ್ಚು ಮತಗಳನ್ನು ಪಡೆದು ಆಯ್ಕೆಯಾಗಿ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ನಡೆಸುವರು ಎಂದು ಅಭ್ಯರ್ಥಿ ಗೋವಿಂದ ಎಂ.ಕಾರಜೋಳರವರ ಪುತ್ರ ಉಮೇಶ್‌ಕಾರಜೋಳ ತಿಳಿಸಿದರು. ಅವರು, ನಗರದ ಹೌಸಿಂಗ್‌ಬೋರ್ಡ್ ಕಾಲೋನಿ, ತ್ಯಾಗರಾಜನಗರ ಮುಂತಾದ ಕಡೆಗಳಲ್ಲಿ ತಂದೆ, ಅಭ್ಯರ್ಥಿ ಗೋವಿಂದ ಎಂ.ಕಾರಜೋಳಪರ ಮತಯಾಚನೆ ಮಾಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನು ಭೇಟಿ ಮಾಡಿದ ಅವರು, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಳೆದ ಎರಡು ಲೋಕಸಭಾ ಚುನಾವಣೆಗಳಲ್ಲಿ ಹೊರಗಡೆಯಿಂದ ಬಂದ ವ್ಯಕ್ತಿಗೆ ಅವಕಾಶ ಮಾಡಿಕೊಟ್ಟಿದ್ಧಾರೆ. ಬಿಜೆಪಿ ಪಕ್ಷದಿಂದಲೂ ಸಹ ಗೋವಿಂದ ಎಂ.ಕಾರಜೋಳ ಸಮರ್ಥವ್ಯಕ್ತಿಯಾಗಿದ್ದು, ಅವರ ಸ್ಪರ್ಧೆಯಿಂದ ಗೆಲುವು ಸುಲಭವಾಗಲಿದೆ ಎಂದು ಟಿಕೆಟ್ ನೀಡಿದ್ದಾರೆ. ನಮ್ಮ ತಂದೆ ಈ ಹಿಂದೆ ಸರ್ಕಾರದಲ್ಲಿ ಸಚಿವರಾದಾಗ ಜಿಲ್ಲೆಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ಧಾರೆ ಎಂದರು. ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಇಂದು ರಾಷ್ಟ್ರದೆಲ್ಲೆಡೆ ಮೋದಿಯವರ ಆಡಳಿತವನ್ನು ಜನ ಬಯಸುತ್ತಿದ್ದಾರೆ. ಇಂದಿನ ಪ್ರಸ್ತುತ ಸ್ಥಿತಿಯಲ್ಲಿ ದೇಶಕ್ಕೆ ಉತ್ತಮ ಆಡಳಿತ ನೀಡುವ ಶಕ್ತಿ, ಸಾಮರ್ಥ್ಯವಿರುವುದು ಪ್ರಧಾನಮಂತ್ರಿ ನರೇಂದ್ರಮೋದಿಯವರಿಗೆ ಮಾತ್ರ ಸಾಧ್ಯ. ಆದ್ದರಿಂದ ನಾವೆಲ್ಲರೂ ಅಭ್ಯರ್ಥಿ ಗೋವಿಂದ ಎಂ.ಕಾರಜೋಳ ಗೆಲುವಿಗೆ ಹೋರಾಟ ನಡೆಸಬೇಕು ಎಂದರು. ನಗರದ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಉರ್ದು ಶಾಲೆ ಶಿಕ್ಷಕ ಹಲವು ಪ್ರಕರಣಗಳಲ್ಲಿ ಭಾಗಿ, ಅಮಾನತು

» ದಾವಣಗೆರೆ

ಜಗಳೂರು ತಾಲ್ಲೂಕಿನ ಹನುಮಂತಾಪುರ ಗೊಲ್ಲರಹಟ್ಟಿ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆ ಸಹ ಶಿಕ್ಷಕ ಆಂಜನೇಯನಾಯ್ಕ ಇವರನ್ನು ಅಮಾನತು ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ.

ಶಿಕ್ಷಕರಾಗಿದ್ದ ಇವರು ಜಾತಿ, ಜಾತಿಗಳ ಮಧ್ಯೆ ವೈಷಮ್ಯ ಮೂಡಿಸುವುದು, ಶಾಲೆಗೆ ಗೈರು ಹಾಜರಾಗುವುದು ಮತ್ತು ರಾಜಕೀಯ ಪಕ್ಷಗಳ ಜೊತೆ ಗುರುತಿಸಿಕೊಳ್ಳುವುದು ಹಾಗೂ ಬೇರೆ ಶಿಕ್ಷಕರ ಮೇಲೆ ಒತ್ತಡ ಹೇರುವುದು, ಇವರ ಪ್ರವೃತ್ತಿಯಾಗಿರುತ್ತದೆ. ಈ ಬಗ್ಗೆ ಇವರ ಮೇಲೆ ಸಾರ್ವಜನಿಕರು ದೂರು ನೀಡಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಬೇರೆ ತಾಲ್ಲೂಕುಗಳಿಗೆ ವರ್ಗಾವಣೆ ಮಾಡುವಂತೆ ದೂರು ಸಲ್ಲಿಕೆಯಾಗಿರುತ್ತದೆ. ಮತ್ತು ಈ ಶಿಕ್ಷಕರ ಮೇಲೆ ಜಗಳೂರು ಪೊಲೀಸ್ ಠಾಣೆಯಲ್ಲಿ ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿರುತ್ತದೆ.

ಇವರನಡತೆಕುರಿತಂತೆಪೊಲೀಸ್ಅಧೀಕ್ಷಕರುಹಾಗೂಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ವರದಿ ಸಲ್ಲಿಕೆಯಾಗಿರುತ್ತದೆ. ಇವರು ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮಾವಳಿಗೆ ವಿರುದ್ದವಾಗಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಸೇವೆಯಿಂದ ಅಮಾನತು ಮಾಡಿ ಆದೇಶಿಸಲಾಗಿದೆ.

## ಪ್ರಮುಖ ಸುದ್ದಿ

### ಶತಗತಾಯ ಪ್ರಯತ್ನಕ್ಕೆ ಮುಂದಾಗ ಸಿಇಓ, ಇಲಾಖಾವಾರು ಮತದಾರ ಜಾಗೃತಿ ಕಾರ್ಯಕ್ರಮ

# ಚುನಾವಣೆಯಲ್ಲಿ ಶೇ 85ಕ್ಕಿಂತ ಹೆಚ್ಚು ಮತದಾನದ ಗುರಿ

» ದಾವಣಗೆರೆ



ಪರೋಕ್ಷ ಪ್ರಜಾಪ್ರಭುತ್ವ ವ್ಯವಸ್ಥೆ ನಮ್ಮದಾಗಿದ್ದು ಮತದಾನದ ಮೂಲಕ ಪ್ರತಿನಿಧಿಗಳನ್ನು ಆಯ್ಕೆ ಮಾಡಿ ಕಳುಹಿಸಲಾಗುತ್ತದೆ. ಆದರೆ ಹೆಚ್ಚು ಮತದಾನವಾಗುವುದರಿಂದ ಉತ್ತಮರ ಆಯ್ಕೆ ಸಾಧ್ಯವಿದೆ ಎಂದು ಈ ಭಾರಿಯ ಲೋಕಸಭಾ ಚುನಾವಣೆಯಲ್ಲಿ ಶೇ 85 ಕ್ಕಿಂತ ಹೆಚ್ಚು ಮತದಾನದ ಗುರಿ ಹೊಂದಲಾಗಿದ್ದು ಮತದಾನ ಜಾಗೃತಿಗೆ ಇಲಾಖಾವಾರು ಕಾರ್ಯಕ್ರಮ ರೂಪಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಏರ್ಪಡಿಸುವ ಕುರಿತು ಕರೆಯಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿಯೊಬ್ಬರ ಮತ ಅತ್ಯಮೂಲ್ಯವಾದದು, ಈ ನಿಟ್ಟಿನಲ್ಲಿ ಎಲ್ಲರೂ ಮೇ 7 ರಂದು ಮತಗಟ್ಟೆಗೆ ಬಂದು ಮತದಾನ ಮಾಡಬೇಕೆನ್ನುವುದು ನಮ್ಮ ಪ್ರಮುಖ ಗುರಿಯಾಗಿದೆ. ಕಳೆದ ಚುನಾವಣೆಯಲ್ಲಿ ಎಲ್ಲಿ ಮತದಾನ ಕಡಿಮೆಯಾಗಿದೆ ಮತ್ತು ಮತದಾನ ಹೆಚ್ಚಾದ ಕಡೆಯು ಮತದಾನ ಜಾಗೃತಿ ಕಾರ್ಯಕ್ರಮಗಳಾಗಬೇಕು. ಎಲ್ಲಿ ಕಡಿಮೆಯಾಗಿದೆಅಲ್ಲಿಹೆಚ್ಚು,ಎಲ್ಲಿಹೆಚ್ಚಾಗಿದೆ ಅಲ್ಲಿ ತುಸು ಹೆಚ್ಚಿನ ಮತದಾನವಾಗುವಂತೆ ನೋಡಿಕೊಳ್ಳಬೇಕಾಗಿದೆ ಎಂದರು.

ನವ ಯುವ ಮತದಾರರು, ಮಧ್ಯ ವಯಸ್ಕರು, ಮಹಿಳೆಯರು, ಹಿರಿಯ ನಾಗರಿಕರು, ವಿಶೇಷಚೇತನರು ಸೇರಿದಂತೆ ಎಲ್ಲ ವರ್ಗದ ಮತದಾರರ ಆಕರ್ಷಣೆ ನಮ್ಮ ಗುರಿಯಾಗಿದೆ. ಇದಕ್ಕಾಗಿ ಜಿಲ್ಲೆಯಲ್ಲಿ 60 ಕ್ಕಿಂತ ಹೆಚ್ಚು ವಿಶೇಷ ಮತಗಟ್ಟೆಗಳನ್ನು ಸ್ಥಾಪನೆಮಾಡಲಾಗುತ್ತಿದೆ.ಯುವಮತಗಟ್ಟೆ, ಸಖಿ, ವಿಶೇಷಚೇತನರು, ಸಂಪ್ರದಾಯಿಕ, ವಿಷಯಾಧಾರಿತ ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗುತ್ತಿದೆ.

ಎಲ್ಲಾ ಮತಗಟ್ಟೆಯಲ್ಲಿ ಕನಿಷ್ಠ ಸೌಲಭ್ಯದ ಭರವಸೆ ಮೂಡಿಸುವುದು, ಸಾಂಪ್ರದಾಯಿಕ, ಸಾಂಸ್ಕೃತಿಕ, ಜಾನಪದ ಕಾರ್ಯಕ್ರಮ, ಚರ್ಚಾಸ್ಪರ್ಧೆ, ಗುಂಪು ಚರ್ಚೆ, ಆನ್‌ಲೈನ್ ಸೇರಿದಂತೆ, ಮನೆ ಮನೆ ಭೇಟಿ, ಚುನಾವಣಾ ಆಯೋಗದ ಕ್ರಮಗಳ ಜಾಗೃತಿ, ಫ್ಯಾಷನ್ ಶೋ, ವಿವಿಧ ಪಂದ್ಯಾವಳಿಗಳು, ಜಾಥಾ, ಕವಾಲಿ, ಕಾರ್ಮಿಕರ ಅರಿವು, ಸಂಗೀತ ಕಾರ್ಯಕ್ರಮ, ಮ್ಯಾರಾಥಾನ್, ಕ್ವಿಜ್, ರೋಡ್‌ಶೋ, ರೀಲ್ಸ್, ಸಾಹಸ ಕ್ರೀಡೆಗಳು, ಯೋಗಾ ಸೇರಿದದಂತೆ ಅನೇಕ ಕಾರ್ಯಕ್ರಮಗಳನ್ನು ರೂಪಿಸಲು ತಿಳಿಸಿದರು.

ಕಾರ್ಯಕ್ರಮಗಳನ್ನು ಗ್ರಾಮ ಮಟ್ಟದಿಂದ ವಾರ್ಡ್ ಮಟ್ಟದವರೆಗೂ ಹಮ್ಮಿಕೊಳ್ಳುವ ಮೂಲಕ ಪ್ರತಿನಿತ್ಯ ಮತದಾರರ ಜಾಗೃತಿ ಕಾರ್ಯಕ್ರಮಗಳು ನಡೆಯುವಂತೆ ಇಲಾಖಾವಾರು ಪಟ್ಟಿಯನ್ನು ನೀಡಲು ಸೂಚಿಸಿ ಚುನಾವಣೆ ಹತ್ತಿರ ಬರುತ್ತಿದ್ದು ಎಲ್ಲಾ ಇಲಾಖೆ ಅಧಿಕಾರಿಗಳು ಸಕ್ರಿಯವಾಗಿ ಭಾಗವಹಿಸುವ ಮೂಲಕ ಹೆಚ್ಚು ಮತದಾನವಾಗುವಂತೆ ನೋಡಿಕೊಳ್ಳುವುದು ನಮ್ಮಗಳ ಜವಾಬ್ದಾರಿಯಾಗಿದೆ ಎಂದರು.

# ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಜಿಲ್ಲಾಡಳಿತ ಸಜ್ಜು : ಜಿಲ್ಲಾಧಿಕಾರಿ ಟಿ.ವೆಂಕಟೇಶ್

» **ಚಿತ್ರದುರ್ಗ**

ಏಪ್ರಿಲ್ 26ರಂದು ನಡೆಯಲಿರುವ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾ ಚುನಾವಣಾಶಾಖೆಯುಅಗತ್ಯಸಿದ್ಧತೆಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಹೇಳಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಉಮೇದುವಾರರಿಗೆ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮತದಾನ ಪೂರ್ವ ಸಿದ್ಧತೆಗಳ ಮಾಹಿತಿ ನೀಡಿದರಲ್ಲದೇ ತುಮಕೂರುಜಿಲ್ಲೆಯಶಿರಾಮತ್ತುಪಾವಗಡ ತಾಲೂಕುಗಳು ಸೇರಿದಂತೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೊಳಪಡುವ 08ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಿಗೆ ಸರಬರಾಜಾಗಲಿರುವ ಬ್ಯಾಲೆಟ್ ಯುನಿಟ್, ಕಂಟ್ರೋಲ್ ಯುನಿಟ್ ಮತ್ತು ವಿವಿಪ್ಯಾಟ್‌ಗಳ 2ನೇ ಹಂತದ ರ್‍ಯಾಂಡಮೈಜೇಶನ್ ಮತ್ತು ಹಂಚಿಕೆ ವಿಧಾನಗಳ ಕುರಿತು ಮಾಹಿತಿ ನೀಡಿದರು.

ಈ ಮತಯಂತ್ರಗಳು ಮತಗಟ್ಟೆಗೆ ಹಂಚಿಕೆ ಮಾಡುವ ಕಾರ್ಯ




ಏಪ್ರಿಲ್ 25ರಂದು ನಿಯಮಾನುಸಾರ ನಡೆಯಲಿದೆ. ಈ ಎಲ್ಲಾ ಪ್ರಕ್ರಿಯೆಗಳನ್ನು ಉಮೇದುವಾರರು ಅಥವಾ ಅವರಿಂದ ನಿಯೋಜಿಸಲಾದ ಸಿಬ್ಬಂಧಿಗಳು ಖುದ್ದು ಸ್ಥಳದಲ್ಲಿ ಹಾಜರಿದ್ದು, ವೀಕ್ಷಿಸಬಹುದಾಗಿದೆ ಎಂದ ಅವರು, ಈ ಎಲ್ಲಾ ವಿದ್ಯಾಮಾನಗಳನ್ನು ಪ್ರತಿ ಮತಗಟ್ಟೆಗಳಿಗೆ ನೇಮಿಸಲಾಗುವ ರಾಜಕೀಯ ಪಕ್ಷಗಳ ಏಜೆಂಟರಿಗೆ ತಿಳಿಸುವಂತೆ ಹಾಗೂ ಯಾವುದೇ ಅಡಚಣೆಗಳಾಗದಂತೆ ನೋಡಿಕೊಳ್ಳಲು ಸೂಚಿಸಿದರು.

ಕ್ಷೇತ್ರದ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗುವ 2168ಮತಗಟ್ಟೆಗಳಿಗೆ ಪ್ರತಿ ಕೇಂದ್ರಕ್ಕೆ 2ಮತಯಂತ್ರದಂತೆ ಒಟ್ಟು 4336 ಮತಯಂತ್ರಗಳನ್ನು ಹಂಚಿಕೆ ಮಾಡಲಾಗುವುದು. ಅಲ್ಲದೇ ತಾಂತ್ರಿಕ ದೋಷ ಮತ್ತಿತರ ತುರ್ತು ಸಂದರ್ಭಗಳಲ್ಲಿ ಎದುರಾಗಬಹುದಾದ ಸಮಸ್ಯೆಗಳ ಪರಿಹಾರ ಕ್ರಮವಾಗಿ ಹೆಚ್ಚುವರಿಯಾಗಿ 897ಮತಯಂತ್ರಗಳನ್ನುಕಾಯ್ದಿರಿಸಲಾಗಿದೆ ಎಂದ ಅವರು, ಈ ಚುನಾವಣೆಗಾಗಿ ಒಟ್ಟು 5233 ಬ್ಯಾಲೆಟ್ ಯುನಿಟ್‌ಗಳನ್ನು ಬಳಸಿಕೊಳ್ಳಲಾಗುತ್ತಿದೆ. ಪ್ರತಿ ಯುನಿಟ್‌ಗೂ ನಂಬರುಗಳನ್ನು ಹಾಕಲಾಗಿದೆ ಎಂದರು.

85+ ವರ್ಷ ಮೇಲ್ಪಟ್ಟ ವಯಸ್ಕರ ತಮ್ಮ ಕೋರಿಕೆ ಮತದಾನಕ್ಕೆ ಇಂದು ಅಂತಿಮದಿನವಾಗಿದೆ. ಈಗಾಗಲೇ ಕೋರಿಕೆ ಸಲ್ಲಿಸಿದ ವಿಕಲಚೇತನರೂ ಕೂಡ ಮನೆಯಲ್ಲಿಯೇ ಮತ ಚಲಾಯಿಸಲು ಅನುಮತಿ ನೀಡಲಾಗಿದೆ. ಅಗತ್ಯ ಸೇವೆಗಳಿಗೆ ನಿಯೋಜಿತ ಮತದಾರರು ಮತ ಚಲಾಯಿಸಲು ಜಿಲ್ಲೆಯ ತಹಶೀಲ್ದಾರರ ಕಚೇರಿಯಲ್ಲಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಅರ್ಹರು ಏಪ್ರಿಲ್ 19, 20 ಮತ್ತು 21ರಂದು ಬೆಳಿಗ್ಗೆ 10ರಿಂದ ಸಂಜೆ 5ಗಂಟೆಯೊಳಗಾಗಿ ಮತ ಚಲಾಯಿಸಬಹುದಾಗಿದೆ ಎಂದರು.

ಪ್ರಸಕ್ತ ಚುನಾವಣೆಯಲ್ಲಿ ಮತ ಚಲಾಯಿಸುವಮತದಾರರಅನುಕೂಲಕ್ಕಾಗಿ ಮತಗಟ್ಟೆಗುರುತಿನಚೀಟಿಗಳನ್ನುವಿತರಿಸುವ ಕಾರ್ಯ ಜಿಲ್ಲೆಯಾದ್ಯಂತ ಇಂದಿನಿಂದ ಆರಂಭಗೊಳ್ಳಲಿದೆ. ಖಾಸಗಿಯವರು ವಿತರಿಸುವ ಪಕ್ಷದ ಗುರುತು ಚಿಹ್ನೆಗಳುಳ್ಳ ಚೀಟಿಗಳನ್ನು ಮತಗಟ್ಟೆಯೊಳಗೆ ಕೊಂಡೊಯ್ಯುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ. ವಿಶೇಷವಾಗಿ ಜಿಲ್ಲಾ ಚುನಾವಣಾಶಾಖೆಯಿಂದವಿತರಿಸಲಾಗುವ ಗುರುತಿನ ಚೀಟಿಗಳಲ್ಲಿ ಮತಗಟ್ಟೆಯ ವಿವರವಾದ ಮಾಹಿತಿ ಒದಗಿಸುವ ಕ್ಯೂಆರ್ ಕೋಡನ್ನು ನಮೂದಿಸಲಾಗಿದೆ. ಈ ಕ್ಯೂಆರ್ ಕೋಡನ್ನು ಮತದಾರರು ಬಳಸಿಕೊಳ್ಳಬಹುದಾಗಿದೆ ಎಂದರು

ಈ ಸಂದರ್ಭದಲ್ಲಿ ಚುನಾವಣಾ ವೀಕ್ಷಕ ಮನೋಹರ ಮರಾಂಡಿ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೇರಿದಂತೆ ಪ್ರಸಕ್ತ ಚುನಾವಣೆಯಲ್ಲಿ ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿರುವ ಉಮೇದುವಾರರು ಅಥವಾ ಅವರ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಇಂದಿನಿಂದ ಬೇವಿನಳಮ್ಮ ದೇವಿಯ ಜಾತ್ರಾಮಹೋತ್ಸವ



» **ಹೊಸದುರ್ಗ**

ತಾಲೂಕಿನ ಮಾಡದಕೆರೆ ಹೋಬಳಿಯ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲೆ ನೆಲೆಸಿರುವ ಸುತ್ತಮುತ್ತಲ ಗ್ರಾಮಗಳ ಅಧಿದೇವತೆ ಶ್ರೀ ಬೇವಿನಹಳ್ಳಿ ಕರಿಯಮ್ಮ (ಬೇವಿನಳಮ್ಮ) ದೇವಿಯ ಜಾತ್ರಾ ಮಹೋತ್ಸವ ಇದೇ ಏಪ್ರಿಲ್ ತಿಂಗಳ 17 ರಿಂದ 24 ರ ವರೆಗೆ ಅಂದರೆ 8 ದಿನಗಳ ಕಾಲ ಧಾರ್ಮಿಕ ಕಾರ್ಣಿಕದಂತೆ ಸಾಂಪ್ರದಾಯದ ಪ್ರಕಾರ ನಡೆಯಲಿದೆ. ಏ.17 ರ ಬುಧವಾರ ಅಮ್ಮನವರ ದೇವಾಲಯದಲ್ಲಿ ಬೇವಿನಹಳ್ಳಿ ಗ್ರಾಮಸ್ಥರು ಹಾಗೂ ಬೀರೇನಹಳ್ಳಿ ಗ್ರಾಮದ ಬಗ್ಗೆನಹಳ್ಳಿ ಜಲ್ದೆನವರ ವಂಶಸ್ಥರಿಂದ ಧ್ವಜಾರೋಹಣ, ಬೇರಿತಾಂಡನ, ಅಂಕುರಾರ್ಪಣೆ ಸೇವೆ, ದೇವಾಲಯದ ಮುಂಭಾಗ ಮದಲಿಂಗಿತ್ತಿ ಚಪ್ಪರದ ಸೇವೆ ಜರುಗಲಿದೆ.19ರ ಶುಕ್ರವಾರ ರಾತ್ರಿ 8 ಸುಮಾರಿನಲ್ಲಿ ಜಲ್ದೆನವರ ವಂಶಸ್ಥರು ಹಾಗೂ ಭಕ್ತರಿಂದ ನಡೆಮುಡಿ ಸೇವೆ, ಜಲದಿ ಗಂಗಸ್ಥಾನ ಮತ್ತು ಮದಾಲ್ಸೆ ಉತ್ಸವ 20ರ ಶನಿವಾರ ರಾತ್ರಿ ಬೇವಿನಹಳ್ಳಿ ಗ್ರಾಮಸ್ಥರಿಂದ ಹೂವಿನ ಉತ್ಸವ 21 ರ ಭಾನುವಾರ ಗದ್ದುಗೆ ಕಂಬಳಿ ಸೇವೆ, ಗದ್ದುಗೆ ಉಯ್ಯಾಲೆ ಉತ್ಸವ ಜರುಗಲಿದೆ.22 ರ ಸೋಮವಾರ ಮಧ್ಯಾಹ್ನ 3 ಗಂಟೆಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅಮ್ಮನವರ ರಥೋತ್ಸವ ನಡೆಯಲಿದೆ. 23 ರ ಮಂಗಳವಾರ ಸಿಡಿ ಉತ್ಸವ ಹಾಗೂ ಹೂವಿನ ಉತ್ಸವ, ನಂತರ ರಂಗವ್ವನಹಳ್ಳಿ, ಶೀರನಕಟ್ಟೆ, ಅಯ್ಯನಹಳ್ಳಿ, ಮಲ್ಲಾಪುರ, ನಾಗತೀಹಳ್ಳಿ, ಕೋಡಿಹಳ್ಳಿ, ಹುಣಸೇಕಟ್ಟೆ ಹಾಗೂ ಇನ್ನಿತರ ಗ್ರಾಮಗಳ ಭಕ್ತರಿಂದ ಹಾಲು ಪಲ್ಲಕ್ಕಿ ಉತ್ಸವ 24ರಂದು ಬುಧವಾರ ಓಕಳಿ ಸೇವೆ. ಸಂಜೆ ಅಮ್ಮನವರನ್ನು ಲಕ್ಕಿಹಳ್ಳಿಗೆ ಬಿಜಂಗೈಯುವ ಕಾರ್ಯ ನಡೆಯಲಿದೆ ಎಂದು ಬೇವಿನಹಳ್ಳಿ ಶ್ರೀ ಕರಿಯಮ್ಮ ದೇವಿ ದೇವಸ್ಥಾನದ ಜೀರ್ಣೋದ್ಧಾರ ಅಭಿವೃದ್ಧಿ ಸೇವಾ ಟ್ರಸ್ಟ್ ತಿಳಿಸಿದೆ.

### ರಾಮನವಮಿ ಜಯಂತಿ ಪ್ರಯುಕ್ತ ಪ್ರಾಣಿ ವಧೆ ನಿಷೇಧ

» **ದಾವಣಗೆರೆ**

ಏಪ್ರಿಲ್ 17 ರಂದು ಶ್ರೀರಾಮನವಮಿ ಹಾಗೂ ಏಪ್ರಿಲ್ 21 ರಂದು ಶ್ರೀಮಹಾವೀರ ಜಯಂತಿ ಪ್ರಯುಕ್ತ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಪ್ರಾಣಿ ವಧೆಯನ್ನು ನಿಷೇಧಿಸಲಾಗಿದೆ. ಈ ದಿನಗಳಂದು ಮಾಂಸ ಮಾರಾಟ ಮಾಡಬಾರದು, ತಪ್ಪಿದಲ್ಲಿ ಮಹಾನಗರಪಾಲಿಕೆಯ ನಿಯಮಾವಳಿಯನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಚುನಾವಣಾ ತರಬೇತಿಗೆ ಚಕ್ಕರ್, ಅನುಚಿತ ವರ್ತನೆ: ಶಿಕ್ಷಕ ಅಮಾನತು

» **ದಾವಣಗೆರೆ**

ಚುನಾವಣಾ ಮತಗಟ್ಟೆ ಮಟ್ಟದ ಅಧಿಕಾರಿ ಸಿಬ್ಬಂದಿಗಳಿಗೆ ಏಪ್ರಿಲ್ 8 ರಂದು ಚನ್ನಗಿರಿ ಯಲ್ಲಿ ಏರ್ಪಡಿಸಿದ ತರಬೇತಿ ಕಾರ್ಯಾಗಾರದಲ್ಲಿ ಬೆಳಿಗ್ಗೆ ಹಾಜರಾಗಿ ಮಧ್ಯಾಹ್ನ ತರಬೇತಿಗೆ ಹಾಜರಾಗದೆ ಅನ್ಯ ಮಹಿಳಾ ಸಿಬ್ಬಂದಿಯೊಂದಿಗೆ ಹೊರ ಹೋಗಿದ್ದು ಇದನ್ನು ಪ್ರಶ್ನಿಸಿದ ತಹಶೀಲ್ದಾರ್ ಅವರೊಂದಿಗೆ ಅನುಚಿತ ವರ್ತನೆ ಮಾಡಿದ ಚನ್ನಗಿರಿ ಎಸ್. ಕೆ.ಎಂ.ಎಸ್ ಮಿಲ್ಲತ್ ಪ್ರೌಢಶಾಲೆ ಸಹ ಶಿಕ್ಷಕರಾದ ಸೈಯದ್ ಸುಲ್ತಾನ್ ಅಹಮದ್ ಇವರನ್ನು ಸೇವೆಯಿಂದ ಅಮಾನತು ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದ ಮತಗಟ್ಟೆ ಅಧ್ಯಕ್ಷ, ಸಹಾಯಕ ಅಧ್ಯಕ್ಷಾಧಿಕಾರಿ ಸಿಬ್ಬಂದಿಗಳಿಗೆ ಏಪ್ರಿಲ್ 8 ರಂದು ಮೊದಲ ಹಂತದ ತರಬೇತಿಯನ್ನು ಎಲ್ಲಾ ತಾಲ್ಲೂಕುಗಳಲ್ಲಿ ಹಮ್ಮಿಕೊಳ್ಳಲಾಗಿತ್ತು. ಚನ್ನಗಿರಿಯಲ್ಲಿ ಶ್ರೀಶ್ರೀಶ್ರೀ ಶಿವಲಿಂಗೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತರಬೇತಿ ನಡೆದಿರುತ್ತದೆ. ಬೆಳಿಗ್ಗೆ ತರಬೇತಿ ಮುಗಿದು ಮಧ್ಯಾಹ್ನ 3 ಗಂಟೆಗೆ ಕೊಠಡಿ ಸಂಖ್ಯೆ 10 ರಲ್ಲಿ ತರಬೇತಿ ಆರಂಭವಾಗಿತ್ತು. ಆದರೆ ಯಾವುದೇ ಅನುಮತಿ ಇಲ್ಲದೆ ತರಬೇತಿಗೆ ಹಾಜರಾದ ಅನ್ಯ ಮಹಿಳಾ ಸಿಬ್ಬಂದಿಯೊಂದಿಗೆ ತರಬೇತಿಯಿಂದ ಹೊರ ಹೋಗುತ್ತಿರುವಾಗ ಇದನ್ನು ಪ್ರಶ್ನಿಸಿದ ತಹಶೀಲ್ದಾರ್ ಅವರೊಂದಿಗೆ ಮಹಿಳಾ ಸಿಬ್ಬಂದಿ ಸಮ್ಮುಖದಲ್ಲಿಯೇ ಅಸಭ್ಯವಾಗಿ ವರ್ತಿಸಿದ್ದಾರೆ, ಜೊತೆಗೆ ಅನ್ಯ ಸಿಬ್ಬಂದಿಯವರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದು ಚುನಾವಣಾ ಪ್ರಾಧಿಕಾರಕ್ಕೆ ಮುಜುಗರ ಉಂಟು ಮಾಡಿರುತ್ತಾರೆ. ಇದು ಪ್ರಜಾಪ್ರತಿನಿಧಿ ಕಾಯ್ದೆ 1951 ರ ಕಲಂ 134 ರ ನಿಯಮ ಉಲ್ಲಂಘನೆ ಮತ್ತು ಕರ್ನಾಟಕ ನಾಗರೀಕ ಸೇವಾ ನಡತೆ ನಿಯಮಾವಳಿ 1966 ಹಾಗೂ ತಿದ್ದುಪಡಿ ನಿಯಮಗಳು 2021 ರ ನಿಯಮ ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಅಮಾನತು ಮಾಡಿ ಕೇಂದ್ರಸ್ಥಾನ ಬಿಡದಂತೆ ಆದೇಶಿಸಲಾಗಿದೆ.

# ಕಾಂಗ್ರೆಸ್ ಪಕ್ಷಕ್ಕೆ ನಿರೀಕ್ಷೆಗಿಂತ ಹೆಚ್ಚಿನ ಜನಬೆಂಬಲ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯಿಂದ ಜನರು ಬೇಸತ್ತು ಹೋಗಿದ್ದು ಜನರು ದೇಶದಲ್ಲೆ ಬದಲಾವಣೆ ಬಯಸುತ್ತಿದ್ದು ಕಾಂಗ್ರೆಸ್‌ಪಕ್ಷಕ್ಕೆಮತಚಲಾಯಿಸಿಸಲು ಜನರು ಉತ್ಸುಕವಾಗಿದ್ದಾರೆ.ಬಿಜೆಪಿ ಬಾಯಿ ಬಿಟ್ಟರೆ ಸುಳ್ಳು ಹೇಳುವ ಮೂಲಕ ಜನರ ಕೊಟ್ಟ ಮಾತು ಉಳಿಸಿಕೊಂಡಿಲ್ಲ ಎಂದು ಶಾಸಕ ಟಿ.ರಘುಮೂರ್ತಿ ಕಿಡಿಕಾರಿದರು..

ಮಂಗಳವಾರದಂದು ತಾಲೂಕಿನ ತುರುವನೂರು ಹೋಬಳಿಯ ಸಿದ್ದೇಶ್ವರ ದುರ್ಗ,ಮುದ್ದಾಪುರ,ಸುಲ್ತಾನಿಪುರ ಹಿರೇಕಬ್ಬಿಗೆರೆ,ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿ ಸೇರಿ ಹಲವು ಹಳ್ಳಿಗಳಲ್ಲಿ ಕಡೆಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಪ್ರಚಾರ ಸಭೆಗಳಲ್ಲಿ ಭಾಗವಹಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ವಿರುದ್ದ ಜನಕ್ರೋಶ ವ್ಯಕ್ತವಾಗಿದ್ದು ಕಾಂಗ್ರೆಸ್ ಪಕ್ಷಕ್ಕೆ ಎಲ್ಲೆಡೆ ಬಾರಿ ಜನ ಬೆಂಬಲ ವ್ಯಕ್ತವಾಗುತ್ತಿದೆ. ತುರುವನೂರು ಹೋಬಳಿ ಪ್ರಚಾರ ಮಾಡುತ್ತಿದ್ದು ಅತಿ ಹೆಚ್ಚಿನ ಮತಗಳನ್ನು ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಚಲಾಯಿಸಿ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಬಿ.ಎನ್. ಚಂದ್ರಪ್ಪ ಲೋಕಸಭಾ ಸದಸ್ಯರಾಗಿ ಆಯ್ಕೆಯಾದಲ್ಲಿ ಭದ್ರಾ ಮೇಲ್ದಂಡೆ ಸೇರಿ ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ಕೇಂದ್ರ ಸರ್ಕಾರದ ಮೂಲಕ ಪರಿಹಾರ ಒದಗಿಸುವ ಕೆಲಸ ಮಾಡುತ್ತಾರೆ .ರಾಜ್ಯದಲ್ಲಿ





ನಮ್ಮದೇ ಸರ್ಕಾರ ಆಡಳಿತದಲ್ಲಿ ಇದ್ದು ಜನರಿಗೆ ಅಭಿವೃದ್ಧಿ ಕಾರ್ಯ ಮಾಡಲು ಸಹಕಾರಿಯಾಗಲಿದೆ ಎಂದರು.ನಮ್ಮ ಸರ್ಕಾರದ ಐದು ಗ್ಯಾರೆಂಟಿ ಯೋಜನೆಗಳು ನಮಗೆ ಸಹಕಾರಿಯಾಗಲಿದ್ದು ಗ್ಯಾರೆಂಟಿ ವಿರುದ್ದ ಗೇಲಿ ಮಾಡಿದವರಿಗೆ ಇಂದು ಜನರು ಉತ್ತರ ನೀಡುತ್ತಿದ್ದು ವಿರೋಧ ಪಕ್ಷದವರಿಗೆ ಜೀರ್ಣಿಸಿಕೊಳ್ಳಲು ಆಗುತ್ತಿಲ್ಲ.

ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಅಲೆಯಿದೆ. ನಮ್ಮ ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆ ಎಂಬುದನ್ನು ಸಾಬೀತು ಮಾಡಲು ಎಲ್ಲಾ ಮುಖಂಡರು ಕಾರ್ಯಕರ್ತರು ಹಗಲಿರುಳು ಚಂದ್ರಪ್ಪ ಗೆಲುವಿಗೆ ಶ್ರಮಸಿ ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಮಾಜಿ ಜಿ.ಪಂ. ಸದಸ್ಯರಾದ ಪ್ರಕಾಶ್ ಮೂರ್ತಿ, ಬಾಬುರೆಡ್ಡಿ, ಮಾಜಿ ತಾ.ಪಂ. ಅಧ್ಯಕ್ಷ ಲಿಂಗರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಭದ್ರಪ್ಪ, ಶಶಿಧರ, ಮುಖಂಡರಾದ ರಾಜಪ್ಪ, ಮಂಜುನಾಥ್, ರವಿ, ಲಕ್ಷ್ಮಣ, ಸಿದ್ದೇಶ್, ನಿರಂಜನ್, ನಾಗೇಶ್, ಲೋಕೇಶ್, ಮೈಲಾರಪ್ಪ, ಚೌಡಪ್ಪ, ಸತೀಶ್, ಲೋಕೇಶ್, ಪರಮೇಶ್, ವಾಜಿದ್, ಬಸವರಾಜ್ ಇದ್ದರು.

## ಇಂದು ಹೊಳಲ್ಕೆರೆಯಲ್ಲಿ ರಾಮನವಮಿ



**ಹೊಳಲ್ಕೆರೆ:** ಭಾರತೀಯ ಸಂಸ್ಕೃತಿಯಲ್ಲಿ ರಾಮಾಯಣ ಮಹಾಕಾವ್ಯ ಯುಗ ಯುಗಾಂತರಗಳಿಂದ ಧರ್ಮದ ಬೇರಾಗಿ, ಜನಪದ ಜೀವನ ಸೂತ್ರವಾಗಿದೆ. ರಾಮನ ಆದರ್ಶ, ಲಕ್ಷ್ಮಣನ ತ್ಯಾಗ, ಸೀತೆಯ ನಿಷ್ಠೆ, ಹನುಮಂತನ ಸ್ವಾಮಿ ಭಕ್ತಿ, ರಾಮರಾಜ್ಯದ ಕನಸು ಇಂದಿಗೂ ಭಾರತೀಯ ವಿಚಾರಧಾರೆಯ ಸ್ಪೂರ್ತಿ ಸೆರೆಯಾಗವೆ. ಈ ಹಿನ್ನೆಲೆಯಲ್ಲಿ ಪರಮಪವಿತ್ರರಾಮನವಮಿ ಹಬ್ಬವನ್ನುತಾಲೂಕಿನ ಬಹುತೇಕ ಹಳ್ಳಿಗಳಲ್ಲಿ ಅಚರಿಸುತ್ತಾರೆ. ತಾಲ್ಲೂಕಿನ ಬೆರಳೆಣಿಕೆಯಷ್ಟು ರಾಮಸೀತಾ ಲಕ್ಷ್ಮಣ ಮಂದಿರವಿದ್ದರೂ, ರಾಮನ ಹೆಸರಲ್ಲಿ. ಆಂಜನೇಯ ದೇವಸ್ಥಾನಗಳಲ್ಲಿ ಜಾತ್ರೆ, ಪರಿಷೆ, ಉತ್ಸವಗಳು, ರಥೋತ್ಸವಗಳು ನಡೆಯುತ್ತವೆ. ಪಟ್ಟಣದ ಕೋಟೆ ರಾಮ ದೇವಸ್ಥಾನ, ಪೇಟೆ ರಾಮಮಂದಿ, ಊರಬಾಗಿಲು ಅಂಜನೇಯ, ಕೊತ್ತಲ ಆಂಜನೇಯ ಸ್ವಾಮಿ ಭಕ್ತರನ್ನು ಆಕರ್ಷಿಸಿದೆ. ನಿತ್ಯ ಪೂಜಾಧಿಗಳ ಜತೆ ರಾಮನಮವಿಯಲ್ಲಿ ಆದ್ದೂರಿ ಪೂಜೆಗಳು ನಡೆಯುತ್ತವೆ. ತಾಲೂಕು. ತಾಳ್ಯದ ಆಂಜನೇಯ, ಚಿಕ್ಕಜಾಜೂರು, ದೊಗ್ಗನಾಳ್, ಕಡೂರು, ಬಿ.ದುರ್ಗ, ಕಲ್ಲನಾಗತ್ತಿಹಳ್ಳಿ, ಅವಿನಹಟ್ಟಿ, ಹೆಚ್.ಡಿ.ಪುರ ಸೇರಿದಂತೆ ಹಲವಾರು ಗ್ರಾಮದಲ್ಲಿ ನಾಮನಮವಿಯಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಅಂಜನೇಯ ದೇವಸ್ಥಾನಗಳಲ್ಲಿ ಕೈಗೊಳ್ಳೂವ ಭಕ್ತರು ಇಷ್ಟಾರ್ಥ ಸಿದ್ದಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸುವರು. ಕಾಡುಗೊಲ್ಲರ ಆರಾಧ್ಯ ದೈವ ಶ್ರೀ ಮೇಲುಕುಂಟೆ ರಂಗನಾಥ ಸ್ವಾಮಿ 1942 ರಲ್ಲಿ ಶಿರಾ ತಾಲೂಕಿನ ಶ್ರೀ ಕ್ಷೇತ್ರ ಮೇಲುಕುಂಟೆಯಿಂದ ಹಿರಿಯೂರು ತಾಲೂಕು ಹೇಮದಳ ಮಾರ್ಗವಾಗಿ ಹೊಳಲ್ಕೆರೆ ತಾಲೂಕಿನ ಆವಿನಹಟ್ಟಿ ಗ್ರಾಮಕ್ಕೆ ಬಂದು ನೆಲೆಗೊಂಡಿರುತದೆ. ಆವಿನಹಟ್ಟಿ ಸುತ್ತಮುತ್ತಲಿನ ಗ್ರಾಮಗಳ ಗ್ರಾಮಸ್ಥರು ಸೇರಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಶ್ರೀ ರಾಮನವಮಿಯ ಪ್ರಯುಕ್ತ ಶ್ರೀ ಮೇಲುಕುಂಟೆ ರಂಗನಾಥ ಸ್ವಾಮಿ, ಶ್ರೀ ಆಂಜನೇಯ ಸ್ವಾಮಿ, ಶ್ರೀ ವೆಂಕಟೇಶ್ವರ ಸ್ವಾಮಿ ದೇವರುಗಳನ್ನು ಕಾಲ್ನಡಿಗೆಯಲ್ಲಿ ಶ್ರೀ ಕ್ಷೇತ್ರ ಹಾಲು ರಾಮೇಶ್ವರಕ್ಕೆ ಹೋಗಿ, ಗಂಗಾಮಾತೆಯ ದರ್ಶನ ಪಡೆದು, ಗಂಗಾಪೂಜೆ ನೆರವೇರಿಸಿಕೊಂಡು ಪುನಹ ಆವಿನಹಟ್ಟಿ ಗ್ರಾಮಕ್ಕೆ ಬಂದು ಮೊದಲಿಗೆ ಮಧುವಣಿಗೆ ಶಾಸ್ತ್ರ ಪ್ರಾರಂಭದಿಂದ ಮೊದಲಗೊಂಡು, ಗರುಡ, ಶೇಷ ವಾಹನ, ಕುದುರೆ ಉತ್ಸವ, ನವಿಲು ವಾಹನ, ಆಂಜನೇಯ ಉತ್ಸವ, ಆನೆ, ಹೂವಿನ ಅಡ್ಡಪಲ್ಲಕ್ಕಿ ಉತ್ಸವದ ಜತೆ ರಾಮನವಮಿ ಶ್ರೀ ಮೇಲುಕುಂಟೆ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ ಪೂರ್ವ ದಿಕ್ಕಿನ ಕಡೆಗೆ ಎಳೆದು, ಬಾಳೆಹಣ್ಣು ಮಂಡಕ್ಕಿ, ಮೆಣಸು ಬೆಲ್ಲ ಸಲ್ಲಿಸುವ ಭಕ್ತರು ಇಷ್ಟಾರ್ಥ ಸಿದ್ದಿ ಪ್ರಾರ್ಥಿಸುತ್ತಾರೆ.

## ಪ್ರಮುಖ ಸುದ್ದಿ

# ಪುಣ್ಯಾರಾಧನೆಗಳು ಶುದ್ಧ ಬದುಕಿಗೆ ಪ್ರೇರಣೆಯಾಗಬೇಕು

» **ಚಿತ್ರದುರ್ಗ**

"ಸಾಧು, ಸಂತರು ಮತ್ತು ದಾರ್ಶನಿಕರ ಸಂಸ್ಮರಣೆ ಅಥವಾ ಪುಣ್ಯಾರಾಧನೆ ಎಂದರೆ ಅವರು ಅನುಭಾವಿಸಿ ಬೋಧಿಸಿದ ತತ್ವಗಳನ್ನು ನಮ್ಮ ವರ್ತಮಾನದ ಬದುಕಿನಲ್ಲಿ ಅನಸರಿಸಿ ನಡೆಯುವುದೇ ಹೊರತು ಜಾತ್ರೆ, ಜಂಗುಳಿ, ಉತ್ಸವಗಳಲ್ಲ. ತತ್ವ ನೀತಿಗಳನ್ನು ಮರೆತ ಆಚರಣೆಗಳು, ನಡೆ-ನುಡಿ ಸಾಮ್ಯವಿಲ್ಲದ ಪ್ರವಚನಗಳು ಅಲ್ಲಮಪ್ರಭುಗಳು ಹೇಳಿದ 'ತೋರುಂಬ ಲಾಭ'ಗಳಾಗುತ್ತವೆಯೇ ವಿನಾ ಸಮ ಸಮಾಜ ಕಟ್ಟುವ, ಸಾಮರಸ್ಯದಿಂದ ಬಾಳುವ ವೈಯುಕ್ತಿಕ ಪ್ರಯತ್ನಗಳೂ ಆಗುವುದಿಲ್ಲ ಮತ್ತು ಶುದ್ಧ ಸಾಮೂಹಿಕ ಸಂಸ್ಕೃತಿಯೂ ಆಗುವುದಿಲ್ಲ" ಎಂದು ವಿಶ್ರಾಂತ ಪ್ರಾಂಶುಪಾಲ ಮತ್ತು ಸಾಹಿತಿ ಡಾ. ಜಿ.ಎನ್. ಮಲ್ಲಿಕಾರ್ಜುನಪ್ಪ ಅಭಿಪ್ರಾಯಪಟ್ಟರು. ಚಿತ್ರದುರ್ಗ ಸಮೀಪದ ದೊಡ್ಡಸಿದ್ದವ್ವನಹಳ್ಳಿ ಗ್ರಾಮದಲ್ಲಿ ದಿನಾಂಕ 14.4. 2024 ರಿಂದ ನಾಲ್ಕು ದಿನಗಳವರೆಗೆ ಏರ್ಪಡಿಸಿದ್ದ ಲಿಂಗೈಕ್ಯ ಶ್ರೀ ಬಸವಲಿಂಗ ಸ್ವಾಮಿಗಳ 64ನೇ ಸಂಸ್ಮರಣೆ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ "ನಡೆ ನುಡಿ ಸಿದ್ಧಾಂತ"



ಕುರಿತು ಉಪನ್ಯಾಸ ನೀಡುತ್ತಾ ಈ ಅಭಿಪ್ರಾಯಪಟ್ಟರು.

ಮುಂದುವರೆದು ಮಾತನಾಡಿ, "ನಮ್ಮ ಮಾತುಗಳು ವೇದಿಕೆ, ಬೋಧನೆಗಳಿಗಷ್ಟೇ ಸೀಮಿತವಾದಾಗ ಕೇಳುಗರು ಅವುಗಳನ್ನು ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲವಷ್ಟೇ ಅಲ್ಲ, ತೆರೆಮರೆಯಲ್ಲಿ ಅಪಹಾಸ್ಯಕ್ಕೂ ಗುರಿಮಾಡುತ್ತಾರೆ. ಹಾಗಾಗಿ ಶಿವಯೋಗದಂತಹ ಆಧ್ಯಾತ್ಮಿಕ ಮಾರ್ಗಗಳನ್ನು ಬೋಧಿಸುವವರು ಬಸವಣ್ಣನವರು ಹೇಳಿದ 'ನಡೆಯಲ್ಲಿಎಚ್ಚೆತ್ತು ನುಡಿಯಲ್ಲಿ ತಪ್ಪಿದರೆ ಹಿಡಿದಿರ್ಪ ಲಿಂಗ ಘಟಸರ್ಪ' ಎನ್ನುವ ಎಚ್ಚರಿಕೆಯಿಂದ ನಡೆದುಕೊಳ್ಳಬೇಕಾಗುತ್ತದೆ. ಹಾಗೆಯೇ ಕೇಳಗರೂ ಕೂಡ ಹೇಳುವವರ ಮಾತುಗಳನ್ನ ಅವರ ನಿಜ ನಡೆಯ ಒರೆಗೆ ಹಚ್ಚಿ ನೋಡುವ ಪರಿಪಾಠ ಬೆಳಸಿ ಕೊಳ್ಳಬೇಕಾಗುತ್ತದೆ" ಎಂದರು.

ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ವೀರಶೈವ ಲಿಂಗಾಯತ ಸಮಾಜದ ಮುಖಂಡ ಕೆಇಬಿ ಷಣ್ಮುಖಪ್ಪನವರು, "ಸಮಾಜಕ್ಕೆ ಮಾರ್ಗ ತೋರಿಸುವ ಧಾರ್ಮಿಕ ಮುಖಂಡರ ನಡೆ ನುಡಿಯಲ್ಲಿ ಇಬ್ಬಂಧಿತನವಿರಬಾರದು, ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ದ್ವಂದ್ವಗಳನ್ನ ಮೀರಿ ಒಟ್ಟು ಸಮಾಜದ ಬೆಳವಣಿಗೆಗೆ ಬೆಳಕು ತೋರಿಸುವಂತಿರಬೇಕು" ಎಂದರು.

ಶರಣೆ ನಾಗಲಾಂಬಿಕ ಅವರ ವಚನಗಾಯನದೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ಸಂಚಾಲಕ ಧನಂಜಯ ಅವರು ಅತಥಿಗಳನ್ನು ಮತ್ತು ಸಭಿಕರನ್ನು ಸ್ವಾಗತಿಸಿದರು.

ಶರಣೆ ಗೀತಾ ರುದ್ರೇಶ್ ಮತ್ತು ಶ್ರೀ ಬಸವಲಿಂಗ ಸ್ವಾಮಿ ಟ್ರಸ್ಟ್‌ನ ಸದಸ್ಯರು ಅತಿಥಿಗಳನ್ನ ಸನ್ಮಾನಿಸಿದರೆ ಕೊನೆಯಲ್ಲಿ ನಿವೃತ್ತ ಉಪನ್ಯಾಸಕರಾದ ಶರಣ ನಂದೀಶ್ ಅವರು ವಂದಿಸಿದರು. ಉಪನ್ಯಾಸಕರಾದ ಶರಣೆ ರಶ್ಮಿಯವರು ಕಾರ್ಯಕ್ರಮ ನಿರೂಪಿಸಿದರು.

ಶಿಕ್ಷಕರಾದ ಶರಣ ನಾಗಭೂಷಣ್, ನಿವೃತ್ತ ಅಭಯಂತಕರಾದ ಶರಣ ಶಿವಕುಮಾರ್ ಮತ್ತು ಜಾಗತಿಕ ಲಿಂಗಾಯತ ಮಹಾಸಭಾದ ಚಿತ್ರದುರ್ಗ ಜಿಲ್ಲಾ ಘಟಕದ ಕಾರ್ಯದರ್ಶಿ ಶರಣ ಬಸವರಾಜ ಕಟ್ಟಿ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸಮಾಜದ ಮುಖಂಡರಾದ ಶರಣೆ ಅನ್ನಪೂರ್ಣಮ್ಮ ಒಳಗೊಂಡಂತೆ ಭಕ್ತಾದಿಗಳು ಮತ್ತು ಗ್ರಾಮಸ್ತರು ಸಭೆಯಲ್ಲಿ ಭಾಗವಹಿಸಿದ್ದರು.

ಫಾಸ್ಟ್ ನ್ಯೂಸ್

## ಜಾನುವಾರುಗಳಿಗೆ ಕಾಲುಬಾಯಿ ಜ್ವರದ ವಿರುದ್ಧ ಲಸಿಕೆ ಹಾಕಿಸಿ

» ದಾವಣಗೆರೆ

ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ಕಾಲುಬಾಯಿ ಜ್ವರದ ಲಸಿಕಾ ಕಾರ್ಯಕ್ರಮವು ಏಪ್ರಿಲ್ 1 ಆರಂಭವಾಗಿದ್ದು 30 ರವರೆಗೆ ನಡೆಯಲಿದೆ. ಎಲ್ಲಾ ಜಾನುವಾರುಗಳಿಗೆ ಕಾಲುಬಾಯಿ ಜ್ವರದ ವಿರುದ್ಧ ಲಸಿಕೆ ಹಾಕಿಸಬೇಕು. ಈ ವರ್ಷ ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ಈ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಪಾಲಿಸಿದಲ್ಲಿ ಜಾನುವಾರುಗಳ ಆರೋಗ್ಯ ರಕ್ಷಣೆ ಹಾಗೂ ಹಾಲಿನ ಇಳುವರಿ ಕಾಪಾಡಲು ಅನುಕೂಲವಾಗುತ್ತದೆ. ಜಾನುವಾರುಗಳನ್ನು ಮುಂಜಾನೆ ಮತ್ತು ಸಾಯಂಕಾಲದ ಸಮಯದಲ್ಲಿ ಮೇಯಿಸಲು ಬಿಡಬೇಕು, ದಿನಕ್ಕೆ 2 ರಿಂದ 3 ಸಾಲ ಶುದ್ಧವಾದ ನೀರನ್ನು ಕುಡಿಸಬೇಕು. ಮಧ್ಯಾಹ್ನದ ಸಮಯದಲ್ಲಿ ಜಾನುವಾರುಗಳನ್ನು ಕೊಟ್ಟಿಗೆಯಲ್ಲಿ ಅಥವಾ ಗಿಡದ ನೆರಳಿನಲ್ಲಿ ಕಟ್ಟಬೇಕು. ಜಾನುವಾರುಗಳಿಗೆ ದಿನದಲ್ಲಿ 1 ರಿಂದ 2 ಸಾರಿ ಮೈ ತೊಳೆಯಬೇಕು. ಹಾಗೂ ಮಿಶ್ರ ತಳಿ ರಾಸು, ಎಮ್ಮೆಗಳಲ್ಲಿ ದೇಹದ ಉಷ್ಣತೆ ಕಾಪಾಡಲು ಗೋಣಿಚೀಲಗಳನ್ನು ನೀರಲ್ಲಿ ತೋಯಿಸಿ ಮೈಮೇಲೆ ಹಾಕಬೇಕು. ದನದ ಕೊಟ್ಟಿಗೆಯನ್ನು ತಂಪಾಗಿ ಇಡಲು ಕೊಟ್ಟಿಗೆಯ ಮೇಲೆ ತೆಂಗಿನ ಗರಿ, ಹುಲ್ಲನ್ನು ಹಾಕಿ, ಕಿಟಕಿಗಳಿಗೆ ಗೋಣಿಚೀಲಗಳನ್ನು ಕಟ್ಟಿ ನೀರನ್ನು ಸಿಂಪಡಿಸುತ್ತಿರಬೇಕು. ಜಮೀನು ಉಳುಮೆ ಮಾಡಲು ಎತ್ತುಗಳನ್ನು ಮುಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಮಾತ್ರ ಕೆಲಸಕ್ಕೆ ಉಪಯೋಗಿಸಬೇಕು. ಕುರಿ ಮತ್ತು ಆಡುಗಳನ್ನು ಸಹ ತಂಪಾದ ಸಮಯದಲ್ಲಿ ಮೇಯಿಸಿ ಮಧ್ಯಾಹ್ನದಲ್ಲಿ ಗಿಡಗಳ ನೆರಳಿನಲ್ಲಿ ನಿಲ್ಲಿಸಬೇಕು. ವಲಸೆ ಕುರಿಗಳು ದೂರದ ಸ್ಥಳಗಳಿಗೆ ಹೋಗುವುದಿದ್ದರೆ, ಮುಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಹೊಡೆದುಕೊಂಡು ಹೋಗಬೇಕು. ಕರು, ಕುರಿ, ಮೇಕೆ ಮರಿಗಳಿಗೆ ಸರಿಯಾದ ಪ್ರಮಾಣದಲ್ಲಿ ಹಾಲನ್ನು ಕುಡಿಸಬೇಕು ಹಾಗೂ ನೀರನ್ನು ಸಹ 2 ರಿಂದ 3 ಸಾರಿ ಕುಡಿಸಬೇಕು. ಹೈನು ರಾಸುಗಳಿಗೆ ಸಾಧ್ಯವಾದಷ್ಟು ಪೌಷ್ಠಿಕ ಆಹಾರ ಹಾಗೂ ಲಭ್ಯವಿರುವ ಹಸಿರು ಮೇವನ್ನು ಕೊಡಬೇಕು. ಪೌಷ್ಠಿಕ ಆಹಾರ ಅಥವಾ ಕುಡಿಯುವ ನೀರಿನಲ್ಲಿ ಲವಣ ಮಿಶ್ರಣ, ಉಪ್ಪು ಹಾಗೂ ಬೆಲ್ಲವನ್ನು ನಿಗದಿತ ಪ್ರಮಾಣದಲ್ಲಿ ನೀಡಬೇಕು. ಜಾನುವಾರುಗಳಿಗೆ ಮುಂಜಾಗ್ರತೆಯಾಗಿ ಇಲಾಖೆಯಿಂದ ಉಚಿತವಾಗಿ ನೀಡುವ ಸಾಂಕ್ರಾಮಿಕ ರೋಗಗಳ ಲಸಿಕೆಗಳನ್ನು ಕಾಲಕಾಲಕ್ಕೆ ನಿಗದಿತ ಸಮಯದಲ್ಲಿ ಹಾಕಿಸಬೇಕು. ಜಂತುನಾಶಕ ಔಷಧಿಯನ್ನು ವರ್ಷಕ್ಕೆ 2 ರಿಂದ 3 ಸಾರಿ ಕುಡಿಸಬೇಕು. ಯಾವುದೇ ಸಮಯದಲ್ಲಿ ಕಾಯಿಲೆಯಿಂದ ಬಳಲುವ ಜಾನುವಾರುಗಳನ್ನು ಹತ್ತಿರದ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಚಿಕಿತ್ಸೆ ಕೊಡಿಸಬೇಕು. ನಿರ್ಜಲೀಕರಣಗೊಂಡ ಜಾನುವಾರುಗಳಿಗೆ ಉಪ್ಪು, ಅಡುಗೆ ಸೋಡಾ, ಬೆಲ್ಲ ಹಾಗೂ ಲಿಂಬೆಹಣ್ಣಿನ ರಸವನ್ನು ನೀರಿನಲ್ಲಿ ಮಿಶ್ರಣ ಮಾಡಿ ದಿನದಲ್ಲಿ 3 ರಿಂದ 4 ಸಾರಿ ಕುಡಿಸಬೇಕು. ಕೊಟ್ಟಿಗೆಯ ಸುತ್ತಮುತ್ತ ಮತ್ತು ತೋಟ, ಹೊಲದ ಬದುವುಗಳಲ್ಲಿ ಮೇವಿನ ಮರಗಳನ್ನು ಬೆಳೆಸುವುದರಿಂದ ಜಾನುವಾರುಗಳಿಗೆ ತಂಪಾದ ನೆರಳು ಹಾಗೂ ಪೌಷ್ಠಿಕ ಆಹಾರವಾಗಿ ಹಸಿರು ಸೊಪ್ಪು ತಿನ್ನಿಸಲು ಅನುಕೂಲವಾಗುತ್ತದೆ. ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಯಾವುದೇ ಕಾರಣಕ್ಕೂ ಸುಟ್ಟು ಹಾಕದೇ ಬಣವೆ ಹಾಕಿ ಅಥವಾ ಸುರುಳಿ ಸುತ್ತಿಟ್ಟುಕೊಂಡು ಮೇವನ್ನು ಸಂಗ್ರಹಿಸಬೇಕು.

## 18ಕ್ಕೆ ದಾವಣಗೆರೆಗೆ ಸಿಎಂ, ಡಿಸಿಎಂ: ಮಲ್ಲಿಕಾರ್ಜುನ್

» ದಾವಣಗೆರೆ

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಏಪ್ರಿಲ್ 18ಕ್ಕೆ ದಾವಣಗೆರೆಗೆ ಆಗಮಿಸಲಿದ್ದಾರೆ. ಅಂದು ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಜಿಲ್ಲೆಯ ಕಾಂಗ್ರೆಸ್ ಶಾಸಕರು, ಮುಖಂಡರು, ಕಾರ್ಯಕರ್ತರ ಜೊತೆ ಭಾರೀ ಮೆರವಣಿಗೆ ಮೂಲಕ ಆಗಮಿಸಿ ಮೂರನೇ ಬಾರಿಗೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ದಾವಣಗೆರೆ ಲೋಕಸಭಾ ಕ್ಷೇತ್ರದಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.ದಾವಣಗೆರೆಯಲ್ಲಿ ಒಳ್ಳೆಯ ವಾತಾವರಣ ಇದೆ. ರಾಜ್ಯ ಸರ್ಕಾರದ ಗ್ಯಾರಂಟಿ ಕೆಲಸ ಮಾಡಿದೆ. ಕಾಂಗ್ರೆಸ್ ಪಕ್ಷದತ್ತ ಜನರು ಒಲವು ತೋರಿಸುತ್ತಿದ್ದಾರೆ. ಮಹಾನಗರ ಪಾಲಿಕೆಯ ಬಿಜೆಪಿ ಸದಸ್ಯರಾದ ಸೋಗಿ ಶಾಂತಕುಮಾರ್, ಸೌಮ್ಯ ನರೇಂದ್ರ, ಗೋಣೆಪ್ಪ, ಜಯಮ್ಮ ಗೋಪಿನಾಯ್ಕ್ ಕಾಂಗ್ರೆಸ್ ಸೇರಿದ್ದಾರೆ. ಬಿಜೆಪಿ ಸಂಸದರ ವರ್ತನೆಯಿಂದ ಎಲ್ಲರೂ ಬೇಸತ್ತಿದ್ದಾರೆ. ಹೀಗಾಗಿ ಎಲ್ಲರೂ ಕಾಂಗ್ರೆಸ್ ಸೇರುತ್ತಿದ್ದಾರೆ. ಏಪ್ರಿಲ್ 18ಕ್ಕೆ ಮೆರವಣಿಗೆ ಇದ್ದು ಸಿಎಂ ಬರುತ್ತಾರೆ.

## ದಾವಣಗೆರೆ ಪಕ್ಷೇತರ ಅಭ್ಯರ್ಥಿ ಪ್ರಸನ್ನ ಸ್ಪರ್ಧೆ

» ದಾವಣಗೆರೆ

ದಾವಣಗೆರೆಯ ಸಮಗ್ರ ಅಭಿವೃದ್ಧಿಗಾಗಿ ಲೋಕಸಭಾ ಪಕ್ಷೇತರ ಅಭ್ಯರ್ಥಿಯಾದ ನನಗೆ ಮತ ಹಾಕುವುದರ ಮೂಲಕ ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಪಕ್ಷೇತರ ಅಭ್ಯರ್ಥಿ ಬಿ.ಆರ್.ಪ್ರಸನ್ನ ಚನ್ನಗಿರಿ ಮನವಿ ಮಾಡಿದರು.

# ಕಾರಜೋಳರನ್ನು 2 ಲಕ್ಷ ಅಂತರದಿಂದ ಗೆಲ್ಲಿಸಿ

» ಚಿತ್ರದುರ್ಗ



ತಾಯಿಯ ಅಂತ್ಯ ಸಂಸ್ಕಾರ ನಡೆಸಿ ಅಂದೇ ಕೆಲಸದಲ್ಲಿ ನಿರತರಾದ ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಬೇಕಾಗಿರುವುದರಿಂದ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಎರಡು ಲಕ್ಷ ಮತಗಳ ಅಂತರದಿಂದ ಗೆಲ್ಲಿಸುವಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಚಳ್ಳಕೆರೆ ರಸ್ತೆಯಲ್ಲಿರುವ ಎಸ್.ಜೆ. ಕನ್ವೆನ್‌ಷನ್ ಹಾಲ್‌ನಲ್ಲಿ ಮಂಗಳವಾರ ನಡೆದ ವೀರಶೈವ ಲಿಂಗಾಯಿತ ಮುಖಂಡರ ಸಭೆ ಉದ್ಘಾಟಿಸಿ ಮಾತನಾಡಿದ ಬಿ.ಎಸ್. ಯಡಿಯೂರಪ್ಪನವರು ಹತ್ತು ವರ್ಷಗಳ ಕಾಲ ಅತ್ಯುತ್ತಮ ಆಡಳಿತ ನೀಡಿದ ನರೇಂದ್ರಮೋದಿ ಮತ್ತೊಮ್ಮೆ ದೇಶದ ಪ್ರಧಾನಿಯಾಗಬೇಕೆಂಬ ಕೂಗು ಎಲ್ಲೆಡೆ ಕೇಳಿ ಬರುತ್ತಿದೆ. ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗ ಜಿಲ್ಲೆಗೆ ಅಪ್ಪರ್‌ಭದ್ರಾ ಯೋಜನೆಗಾಗಿ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರ ಮಂಜೂರು ಮಾಡಿದೆ. ಇಂದಲ್ಲ ನಾಳೆ ಆ ಹಣ ಬಂದೆ ಬರುತ್ತದೆ. ರೈತರಿಗಾಗಿ ಜಾರಿಗೆ ತಂದ ಕಿಸಾನ್ ಸಮ್ಮಾನ್ ಯೋಜನೆಯನ್ನು ರದ್ದುಪಡಿಸಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ಎನ್ನುವುದನ್ನು ಸಾಬೀತುಪಡಿಸಿದೆ ಎಂದು ಹೇಳಿದರು.

ದೇಶದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಬಿಜೆಪಿ.ಯೊಂದಿಗೆ ಮೈತ್ರಿ ಮಾಡಿಕೊಂಡು ರಾಜ್ಯದ 28 ಕ್ಷೇತ್ರಗಳಲ್ಲಿಯೂ ಸುತ್ತಾಡಿ ನಮ್ಮ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುತ್ತಿದ್ದಾರೆ. ಈ ಶಕ್ತಿಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಕಾರ್ಯಕರ್ತರು ಮನೆ ಮನೆಗೆ ಹೋಗಿ ಕೇಂದ್ರ ಸರ್ಕಾರದ ಸಾಧನೆಗಳನ್ನು ತಿಳಿಸಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಗೆಲುವಿಗೆ ಶ್ರಮಿಸುವಂತೆ ಬಿ.ಎಸ್. ಯಡಿಯೂರಪ್ಪ ಕರೆ ನೀಡಿದರು.

ಮಾಜಿ ಸಚಿವ ಮುರುಗೇಶ್ ನಿರಾಣಿ ಮಾತನಾಡಿಗೋವಿಂದಕಾರಜೋಳರವರು ಮುದೋಳದಲ್ಲಿ ಯಾವ ರೀತಿ ಅಭಿವೃದ್ಧಿಪಡಿಸಿದ್ದಾರೋ ಅದೇ ರೀತಿ ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಾರೆ. ರಾಜ್ಯದಲ್ಲಿ ಬಿಜೆಪಿ. ಸರ್ಕಾರ ಅಧಿಕಾರದಲ್ಲಿದ್ದಾಗ ಅನೇಕ ಖಾತೆಗಳನ್ನು ಸಮರ್ಥವಾಗಿ ನಿಭಾಯಿಸಿದ ಹಿರಿಯ ರಾಜಕಾರಣಿಯನ್ನು ಗೆಲ್ಲಿಸಿ ಲೋಕಸಭೆಗೆ ಕಳಿಸಿಕೊಡಿ ಎಂದು ಕಾರ್ಯಕರ್ತರಲ್ಲಿ ಕೋರಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಜನರ ಸೇವೆ ಮಾಡಲು ಭಗವಂತ ಅವಕಾಶ ಕೊಟ್ಟಿದ್ದಾನೆಂದುಕೊಂಡು ಸ್ಪರ್ಧೆಗಿಳಿದಿದ್ದೇನೆ. ಜಿಲ್ಲೆಯಲ್ಲಿ ನೀರಿನ ಸಮಸ್ಯೆಯಿದೆ. ಅಪ್ಪರ್‌ಭದ್ರಾಯೋಜನೆಗಾಗಿ ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ತಂದೆ ತರುತ್ತೇನೆ. ಅದಕ್ಕಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ನಿಮ್ಮಗಳ ಪ್ರೀತಿ ವಿಶ್ವಾಸಕ್ಕೆ ಧಕ್ಕೆಯಾಗದಂತೆ ಕೆಲಸ ಮಾಡುತ್ತೇನೆ. ಮತ್ತೊಮ್ಮೆ ನರೇಂದ್ರಮೋದಿರವರ ಕೈಬಲಪಡಿಸಿ ದೇಶದ ಪ್ರಧಾನಿಯನ್ನಾಗಿಸಿ ಎಂದು ಅಭ್ಯರ್ಥಿ ಗೋವಿಂದ ಕಾರಜೋಳ ವಿನಂತಿಸಿದರು.

ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಮಾತನಾಡಿ ಜಗತ್ತು ಕಂಡ ಅಭಿವೃದ್ಧಿಯ ಹರಿಕಾರ ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಲೇಬೇಕಾಗಿರುವುದರಿಂದ ಇದೆ ತಿಂಗಳ 26 ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರನ್ನು ಎರಡು ಲಕ್ಷ ಮತಗಳ ಅಂತರದಿಂದ ಗೆಲ್ಲಿಸಿ ಎಂದು ವೀರಶೈವ ಲಿಂಗಾಯಿತ ಮುಖಂಡರುಗಳಲ್ಲಿ ಮನವಿ ಮಾಡಿದರು.

ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರ ಸರ್ಕಾರ ರೈತರಿಗೆ ಆರು ಸಾವಿರ ರೂ.ಗಳನ್ನು ನೀಡುತ್ತಿದೆ. ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರಿಗೆ ವಿವಿಧ ರೀತಿಯ ಸೌಲಭ್ಯ. ಪ್ರತಿ ಕುಟುಂಬಕ್ಕೆ ಐದು ಕೆ.ಜಿ.ಅಕ್ಕಿ, ಉಜ್ವಲ ಯೋಜನೆಯಡಿ ಬಡವರಿಗೆ ಉಚಿತವಾಗಿ ಗ್ಯಾಸ್ ಸಂಪರ್ಕ. ಭಾರತ ವಿಶ್ವದ ಶ್ರೀಮಂತರ ಪಟ್ಟಿಯಲ್ಲಿ ಐದನೆ ಸ್ಥಾನದಲ್ಲಿರುವುದನ್ನು ಮೂರನೆ ಸ್ಥಾನಕ್ಕೆ ತರುವುದಾಗಿ ನರೇಂದ್ರಮೋದಿ ಸಂಕಲ್ಪ ಮಾಡಿದ್ದಾರೆ. ಪ್ರತಿ ಮನೆಗೆ ಉಚಿತ ಕರೆಂಟ್ ನೀಡುವ ಚಿಂತನೆಯಿದೆ. ಹಾಗಾಗಿ ಈ ಬಾರಿಯ ಲೋಕಸಭೆ ಚುನಾವಣೆಗೆ ಅತ್ಯಂತ ಪ್ರಾಮುಖ್ಯತೆಯಿದೆ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಾಜಿ ಶಾಸಕರುಗಳಾದ ಎಸ್.ಕೆ.ಬಸವರಾಜನ್, ನೇರ್ಲಗುಂಟೆ ತಿಪ್ಪೇಸ್ವಾಮಿ, ಚುನಾವಣೆ ಸಂಚಾಲಕ ಎಸ್.ಲಿಂಗಮೂರ್ತಿ, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಕೆ.ಟಿ.ಕುಮಾರ ಸ್ವಾಮಿ, ಮಾಧುರಿ ಗಿರೀಶ್, ಸುರೇಶ್ ಸಿದ್ದಾಪುರ, ಸಂಪತ್‌ಕುಮಾರ್,ಬಾಳೆಕಾಯಿರಾಂದಾಸ್ ಸೇರಿದಂತೆ ಹಲವು ಮುಖಂಡರುಗಳು ವೇದಿಕೆಯಲ್ಲಿದ್ದರು.

# ಕಾರಜೋಳ ಪರ ಚಿತ್ರದುರ್ಗ ವಕೀಲರ ಸಂಘದಲ್ಲಿ ಮತಯಾಚಿಸಿದ ಮಾಜಿ ಸಚಿವ ಸುರೇಶ್‌ಕುಮಾರ್

» ಚಿತ್ರದುರ್ಗ



ಒಂದು ದಿನವೂ ರಜೆ ತೆಗೆದುಕೊಳ್ಳದೆ ದೇಶ ಸೇವೆಗಾಗಿಯೇ ಮುಡುಪಾಗಿರುವ ನರೇಂದ್ರಮೋದಿ ಮೂರನೆ ಬಾರಿಗೆ ಪ್ರಧಾನಿಯಾಗಬೇಕು. ಅದಕ್ಕಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿಯನ್ನು ಬಹುಮತಗಳಿಂದ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಮಾಜಿ ಕಾನೂನು ಸಚಿವ ಸುರೇಶ್ ಕುಮಾರ್ ವಕೀಲರುಗಳಲ್ಲಿ ಮನವಿ ಮಾಡಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಪರ ಮಂಗಳವಾರ ನ್ಯಾಯಾಲಯದಲ್ಲಿ ಮತಯಾಚಿಸಿ ಮಾತನಾಡಿದ ಸುರೇಶ್‌ಕುಮಾರ್ ಕಾಂಗ್ರೆಸ್ ಪಕ್ಷದ ಗ್ಯಾರೆಂಟಿಗಳಿಗಿಂತ ದೇಶಕ್ಕೆ ಗ್ಯಾರೆಂಟಿಯಾಗಿರುವ ಪ್ರಧಾನಿ ನರೇಂದ್ರಮೋದಿಯನ್ನು ಬೆಂಬಲಿಸಿ. ಉಕ್ರೇನ್-ರಷ್ಯ ನಡುವೆ ಯುದ್ದ ನಡೆದಾಗ ನಮ್ಮ ದೇಶದ 22 ಸಾವಿರ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಕರೆ ತಂದು ದಿಟ್ಟತನ ತೋರಿದ ಮೋದಿರವರು ನಮ್ಮ ದೇಶಕ್ಕೆ ಸಿಕ್ಕಿರುವುದು ಪುಣ್ಯ. ಕೋವಿಡ್‌ನಲ್ಲಿ ಉಚಿತ ಲಸಿಕೆ ಕೊಡಿಸಿದ್ದರಿಂದ ಭಾರತದಲ್ಲಿ ಸಾವು-ನೋವಿನ ಪ್ರಮಾಣ ಕಡಿಮೆಯಾಗಿದೆ. ನಾನು ಕಾನೂನು ಸಚಿವನಾಗಿದ್ದಾಗ ವಕೀಲರು, ವೈದ್ಯರುಗಳ ಮೇಲೆ ಹಲ್ಲೆಯಾಗಬಾರದು ಅದಕ್ಕಾಗಿ ರಕ್ಷಣೆ ಕೊಡುವ ಕಾಯಿದೆ ಜಾರಿಗೆ ತಂದಿದ್ದೆ. ರಾಜಕಾರಣಿಗಳಾದವರು ಯಾರನ್ನು ಏಕವಚನದಲ್ಲಿ ಮಾತನಾಡಿಸಬಾರದು. ದೇಶ ಯಾವ ದಿಕ್ಕಿನಲ್ಲಿ ಹೋಗಬೇಕೆಂಬ ಚುನಾವಣೆ ಇದಾಗಿರುವುದರಿಂದ ವಕೀಲರುಗಳು ಬಿಜೆಪಿ. ಅಭ್ಯರ್ಥಿಗೆ ಬೆಂಬಲಿಸುವಂತೆ ಸುರೇಶ್‌ಕುಮಾರ್ ವಿನಂತಿಸಿದರು.

ನನ್ನ ಅವಧಿಯಲ್ಲಿ ನ್ಯಾಯಾಲಯಗಳ ಕಟ್ಟಡ, ವಕೀಲರ ಸಂಘಕ್ಕೆ ಕಂಪ್ಯೂಟರ್ ಜೆರಾಕ್ಸ್‌ಗಳನ್ನು ನೀಡಿದ್ದೇನೆಂದು ವಕೀಲರುಗಳಿಗೆ ಸುರೇಶ್‌ಕುಮಾರ್ ನೆನಪಿಸಿದರು.

ಬೆಂಗಳೂರು ವಕೀಲರ ಸಂಘದ ಮಾಜಿ ಅಧ್ಯಕ್ಷ ಹಾಗೂ ಜೆಡಿಎಸ್. ಕಾನೂನು ವಿಭಾಗದ ರಾಜ್ಯಾಧ್ಯಕ್ಷ ಎ.ಪಿ.ರಂಗನಾಥ್ ಮಾತನಾಡಿ ಒಬ್ಬ ವ್ಯಕ್ತಿಯಿಂದ ಸರ್ಕಾರಕ್ಕೆ ಒಳ್ಳೆಯ ಕೀರ್ತಿ ಬರಬಹುದು. ಕೆಟ್ಟ ಹೆಸರು ಬರಬಹುದು. ಭಾರತ ಬಲಿಷ್ಠ ದೇಶವಾಗಬೇಕಾದರೆ ಇದೆ ತಿಂಗಳ 26 ರಂದು ನಡೆಯುವ ಚುನಾವಣೆಯನ್ನು ಗಂಭೀರವಾಗಿ ತೆಗೆದುಕೊಂಡು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಬಹುಮತಗಳಿಂದ ಗೆಲ್ಲಿಸಿ ನರೇಂದ್ರಮೋದಿ ಮತ್ತೊಮ್ಮೆ ಪ್ರಧಾನಿಯಾಗಲು ಕೈಜೋಡಿಸಿ ಎಂದು ವಕೀರುಗಳನ್ನು ಕೋರಿದರು.

## ತುರುವನೂರು: ಮತದಾನ ಜಾಗೃತಿ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಏಪ್ರಿಲ್ 26ರಂದು ಮತದಾನನಡೆಯಲಿದೆ.ಈಹಿನ್ನೆಲೆಯಲ್ಲಿ ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿ ವ್ಯಾಪ್ತಿಯಲ್ಲಿ ತಾಲ್ಲೂಕು ಸ್ವೀಪ್ ಸಮಿತಿಯಿಂದ ಮಂಗಳವಾರ ಮತದಾನ ಜಾಗೃತಿ ನಡೆಸಲಾಯಿತು.

ತುರುವನೂರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮತದಾನ ಜಾಗೃತಿ ಜಾಥಾ ನಡೆಸಿ, ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಚಿತ್ರದುರ್ಗ ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾ.ಪಂ ಇಓ ಅನಂತರಾಜು ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು, ತುರುವನೂರು ಹೋಬಳಿಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾ.ಪಂ ಸಿಬ್ಬಂದಿ ಆಶಾ, ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ಮತದಾನ ಅರಿವಿಗಾಗಿ ಪಂಜಿನ ಮೆರವಣಿಗೆ


ತುಮಕೂರು: ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಏಪ್ರಿಲ್ 17ರಂದು ಸಂಜೆ 6 ಗಂಟೆಗೆ ನಗರದ ಜ್ಯೂನಿಯರ್ ಕಾಲೇಜು ಮೈದಾನದಿಂದ ಅಮಾನಿಕೆರೆವರೆಗೆ ಪಂಜಿನ ಮೆರವಣಿಗೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷ ಜಿ.ಪ್ರಭು ತಿಳಿಸಿದ್ದಾರೆ.

ಪ್ರಮುಖ ಸುದ್ದಿ

### ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಸಂತೋಷ್‌ಜಿ ಹೇಳಿಕೆ

# ರಾಹುಲ್ ಪ್ರಧಾನಿಯಾಗುವುದು ಕಾಂಗ್ರೆಸ್‌ನವರಿಗೆ ಬೇಕಿಲ್ಲ

» ಚಿತ್ರದುರ್ಗ




ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬರುವುದು ಕಾಂಗ್ರೆಸ್‌ನವರಿಗೆ ಬೇಕಿಲ್ಲ. ಅವರವರ ಕುರ್ಚಿ ಉಳಿಕೊಳ್ಳುವುದೇ ಪೀಕಲಾಟವಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಪೈಪೋಟಿಯಲ್ಲಿ ತೊಡಗಿದ್ದಾರೆಂದು ಬಿಜೆಪಿ. ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಸಂತೋಷ್‌ಜಿ ಟೀಕಿಸಿದರು.

ಉಮಾಪತಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಶಕ್ತಿ ಕೇಂದ್ರದ ಪ್ರಮುಖರ ಸಭೆ ಉದ್ಘಾಟಿಸಿ ಮಾತನಾಡಿದರು.

ರಾಹುಲ್‌ಗಾಂಧಿ ದೇಶದ ಪ್ರಧಾನಿಯಾಗುವುದು ಕಾಂಗ್ರೆಸ್‌ನವರಿಗೆ ಬೇಕಿಲ್ಲ. ಮೈಸೂರು ಲೋಕಸಭಾ ಕ್ಷೇತ್ರದಲ್ಲಿ ಅಭ್ಯರ್ಥಿಯನ್ನು ಗೆಲ್ಲಿಸಿಕೊಂಡು ಕುರ್ಚಿ ಉಳಿಸಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮುತುವರ್ಜಿ ವಹಿಸಿದ್ದರೆ. ಬೆಂಗಳೂರು ಗ್ರಾಮಾಂತರದಲ್ಲಿ ಸಹೋದರ ಡಿ.ಕೆ.ಸುರೇಶ್‌ನನ್ನು ಗೆಲ್ಲಿಸಿಕೊಂಡು ಮರ್ಯಾದೆ ಉಳಿಸಿಕೊಳ್ಳಬೇಕೆಂಬ ದಿಕ್ಕಿನಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಲೆ ಕೆಡಿಸಿಕೊಂಡಿದ್ದಾರೆ. ಇನ್ನು ಮಲ್ಲಿಕಾರ್ಜುನ ಖರ್ಗೆ ಅಳಿಯನ ಗೆಲುವಿಗೆ ಟೊಂಕ ಕಟ್ಟಿ ನಿಂತಿದ್ದಾರೆ. ಕಾಂಗ್ರೆಸ್‌ನವರಿಗೆ ತಮ್ಮ ಪಕ್ಷ ಅಧಿಕಾರಕ್ಕೆ ಬರುತ್ತದೆಂಬ ವಿಶ್ವಾಸವಿಲ್ಲ ಎಂದು ಲೇವಡಿ ಮಾಡಿದರು.

ದೇಶದೆಲ್ಲೆಡೆ ನರೇಂದ್ರಮೋದಿ ನಾಯಕತ್ವವನ್ನು ಜನ ಬಯಸುತ್ತಿದ್ದಾರೆ. ನಾಲ್ಕು ನೂರು ಸೀಟು ಬಂದರೂ ಸಾಕು. 399 ಸ್ಥಾನ ಗೆದ್ದರೂ ಮೋದಿ ಪ್ರಧಾನಿಯಾಗುವುದು ಖಚಿತ. ಕಳೆದ ಮೂರು ತಿಂಗಳಿನಿಂದಲೂ ಬಿಜೆಪಿ. ಚುನಾವಣೆಗೆ ವ್ಯಾಪಕ ತಯಾರಿ ನಡೆಸುತ್ತಿದೆ. ಶಕ್ತಿ ಕೇಂದ್ರದ ಪ್ರಮುಖರು ಮನೆ ಮನೆಗೆ ಹೋಗಿ ಪಕ್ಷದ ಸಾಧನೆಗಳನ್ನು ತಿಳಿಸಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿಯನ್ನು ಗೆಲ್ಲಿಸಿ ಲೋಕಸಭೆ ಕಳಿಸಿಕೊಡಿ ಎಂದು ವಿನಂತಿಸಿದರು.

ರಾಜ್ಯದಲ್ಲಿ 28 ಕ್ಕೆ 28 ಕ್ಷೇತ್ರಗಳನ್ನು ಗೆಲ್ಲಿಸಿಕೊಳ್ಳುವಲ್ಲಿ ಬಿಜೆಪಿ. ಹುಮ್ಮಸ್ಸಿನಿಂದ ಚುನಾವಣೆಗೆ ತಯಾರಾಗಿದೆ. ಈ ಚುನಾವಣೆಗೆ ವಿಶೇಷತೆಯಿದೆ. ಮತದಾನಕ್ಕೆ ಕೇವಲ ಒಂಬತ್ತು ದಿನಗಳ ಬಾಕಿಯಿರುವುದರಿಂದ ಅಭ್ಯರ್ಥಿ ಗೆಲುವಿಗೆ ಶಕ್ತಿ ಕೇಂದ್ರದ ಪ್ರಮುಖರು ಹಗಲು-ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕಿದೆ ಎಂದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಮಾತನಾಡಿ ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನರೇಂದ್ರಮೋದಿ ಯಾವುದೇ ಕಳಂಕ, ಆಪಾದನೆ, ಭ್ರಷ್ಟಾಚಾರವಿಲ್ಲದೆ ಆಡಳಿತ ನಡೆಸಿದ್ದಾರೆ. ಇಂತಹ ನಾಯಕನಿಗೆ ಮತ ನೀಡಲು ದೇಶದ 140 ಕೋಟಿ ಜನ ಹಾತೊರೆಯುತ್ತಿದ್ದಾರೆ. ಅರವತ್ತು ವರ್ಷಗಳ ಕಾಲ ಅಧಿಕಾರ ನಡೆಸಿದ ಕಾಂಗ್ರೆಸ್‌ನಲ್ಲಿ ದೇಶದ ಪ್ರಧಾನಿಯಾಗುವ ಯೋಗ್ಯತೆ ಯಾರಿಗೂ ಇಲ್ಲ. ಅನೇಕ ಹಗರಣಗಳಲ್ಲಿ ಸಿಕ್ಕಿಕೊಂಡು ಜೈಲಿಗೆ ಹೋಗಿ ಬಂದವರಿದ್ದಾರೆ. ಅನೇಕರು ಬೇಲ್‌ನಲ್ಲಿದ್ದಾರೆ. ಬಿಜೆಪಿ. ಅಭಿವೃದ್ಧಿ ಕೆಲಸಗಳನ್ನು ಮನೆ ಮನೆಗೆ ತಿಳಿಸಿ ನನ್ನನ್ನು ಗೆಲ್ಲಿಸಿ ಎಂದು ಕಾರ್ಯಕರ್ತರಲ್ಲಿ ಕೋರಿದರು.ಕಾಂಗ್ರೆಸ್‌ನಿಂದ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್. ಬಿಜೆಪಿ. ದೈತ್ಯ ಶಕ್ತಿಗಳು ಒಂದಾಗಿವೆ. ನಮ್ಮನ್ನು ಎದುರಿಸುವ ಶಕ್ತಿ ಸಾಮರ್ಥ್ಯ ಕಾಂಗ್ರೆಸ್‌ಗಿಲ್ಲ. ಅಭಿವೃದ್ಧಿಯಲ್ಲಿ ಹಿಂದುಳಿದಿರುವ ಚಿತ್ರದುರ್ಗ ಜಿಲ್ಲೆಯನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುವುದು ನನ್ನ ಗುರಿ ಎಂದು ಹೇಳಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡುತ್ತಪಕ್ಷದೇಶಕ್ಕೆನರೇಂದ್ರಮೋದಿ ಬಲವಾಗಿದ್ದಾರೆ. ಅರವತ್ತು ವರ್ಷಗಳಲ್ಲಿ ಕಾಂಗ್ರೆಸ್‌ನಿಂದ ಆಗದ ಅಭಿವೃದ್ಧಿಯನ್ನು ಕೇವಲ ಹತ್ತು ವರ್ಷಗಳಲ್ಲಿ ಸಾಧಿಸಿ ತೋರಿಸಿರುವ ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಬೇಕೆಂದು ಜನ ಹಂಬಲಿಸುತ್ತಿದ್ದಾರೆ. ವಿಮಾನ ನಿಲ್ದಾಣ ಆಸ್ಪತ್ರೆ ಇನ್ನು ಹತ್ತು ಹಲವಾರು ಯೋಜನೆಗಳನ್ನು ದೇಶಕ್ಕೆ ನೀಡಿದ್ದಾರೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಯಾವುದಾದರೂ ದೇಶಗಳ ನಡುವೆ ಯುದ್ದ ನಡೆದರೆ ಸಂಧಾನ ಮಾಡಲು ಬೇರೆ ದೇಶಗಳು ನರೇಂದ್ರಮೋದಿಯ ಸಹಾಯ ಬಯಸುತ್ತಿರುವುದು ಭಾರತದ ಕೀರ್ತಿಯನ್ನು ಹೆಚ್ಚಿಸಿದೆ ಎಂದು ಗುಣಗಾನ ಮಾಡಿದರು.ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ಬಿಜೆಪಿ. ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಂತೋಷ್‌ಜಿ ಅತ್ಯುತ್ತಮ ಸಂಘಟನಾ ಚತುರರು. ಹತ್ತು ವರ್ಷಗಳ ಕಾಲ ದೇಶವನ್ನು ಮನ್ನಡೆಸಿಕೊಂಡು ಹೋದ ನರೇಂದ್ರಮೊದಿ ಮತ್ತೊಮ್ಮೆ ದೇಶದ ಪ್ರಧಾನಿಯಾಗಬೇಕಾಗಿರುವುದರಿಂದ ಈ ಬಾರಿಯ ಲೋಕಸಭೆ ಚುನಾವಣೆಗೆ ಮಹತ್ವವಿದೆ. ಹಾಗಾಗಿ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರನ್ನು ಗೆಲ್ಲಿಸಿಕೊಳ್ಳುವಂತೆ ಹೇಳಿದರು.

ವಿಧಾನಪರಿಷತ್‌ಸದಸ್ಯಕೆ.ಎಸ್.ನವೀನ್, ಮಾಜಿ ಶಾಸಕ ತಿಪ್ಪೇಸ್ವಾಮಿ, ಎಂ.ಎಲ್.ಸಿ.ಚಿದಾನಂದಗೌಡ, ಎಸ್.ಲಿಂಗಮೂರ್ತಿ, ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ಸಂಪತ್‌ಕುಮಾರ್, ಸುರೇಶ್‌ಸಿದ್ದಾಪುರ, ನವೀನ್ ಚಾಲುಕ್ಯ, ಬಾಳೆಕಾಯಿ ರಾಂದಾಸ್ ಇನ್ನು ಮೊದಲಾದವರು ವೇದಿಕೆಯಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T